# ನಮ್ಮ ಜನ
# NAMMA JANA

ಸಮಸ್ತ ಓದುಗರಿಗೆ, ಜಾಹಿರಾತುದಾರರಿಗೆ ಮತ್ತು ಜನತೆಗೆ 78ನೇ ಸ್ವಾತಂತ್ರ್ಯೋತ್ಸವದ ಶುಭಾಶಯಗಳು
» ಸಂಪಾದಕ

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 32 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 15–08–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 02 Issue - 32 | Title- Code: KARKAN 28269 | Chitradurga | Date: 15-08-2024 Thursday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ದೇಶದ ಸ್ವಾತಂತ್ರ್ಯಕ್ಕೆ ಹೋರಾಡಿದ ಮಹಾನ್ ಚೇತನಗಳ ಸ್ಮರಣೆ: ಸಂಸದ ಗೋವಿಂದ ಕಾರಜೋಳ 2

ಚಿತ್ರದುರ್ಗ ತಾಲ್ಲೂಕಿನಲ್ಲಿ 53 ಮಿ.ಮೀ ಮಳೆ 3

ಹೊಸ ಅಂಗನವಾಡಿ ಕೇಂದ್ರ ನಿರ್ಮಾಣಕ್ಕೆ ನಿವೇಶನ ಹಸ್ತಾಂತರ 4


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಹರ್ ಘರ್ ತಿರಂಗಾ ಅಭಿಯಾನ

# ಗಮನ ಸೆಳೆದ ತಿರಂಗಾ ಯಾತ್ರೆ

» ಚಿತ್ರದುರ್ಗ

78ನೇ ಸ್ವಾತಂತ್ರ್ಯೋತ್ಸವದ ಪ್ರಯುಕ್ತ ಹರ್ ಘರ್ ತಿರಂಗಾ ಅಭಿಯಾನದಡಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಅಂಗನವಾಡಿ ಕಾರ್ಯಕರ್ತೆಯರು ತ್ರಿವರ್ಣ ಧ್ವಜ ಹಿಡಿದು ನಗರದಲ್ಲಿ ಬುಧವಾರ ತಿರಂಗಾ ಯಾತ್ರೆ ನಡೆಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಹರ್ ಘರ್ ತಿರಂಗಾ ಅಭಿಯಾನದಡಿ ಹಮ್ಮಿಕೊಂಡಿದ್ದ ತಿರಂಗಾ ಯಾತ್ರೆಗೆ ನಗರದ ಒನಕೆ ಓಬವ್ವ ವೃತ್ತದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಹಾಗೂ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಭಾರತದಲ್ಲಿ ಯಾವುದಾದರೂ ಒಂದು ದಿನವನ್ನು ಸುವರ್ಣ ಅಕ್ಷರಗಳಿಂದ ದಾಖಲಿಸುವುದಾದರೆ ಅದು 1947 ಆಗಸ್ಟ್ 15. ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ ಬಲಿದಾನಗಳ ಪ್ರತೀಕವಾಗಿ ಸ್ವಾತಂತ್ರ್ಯ ದಿನಾಚರಣೆ ಆಚರಿಸಲಾಗುತ್ತಿದೆ. ಹರ್ ಘರ್ ತಿರಂಗಾ ಅಭಿಯಾನದಡಿ ಜಿಲ್ಲೆಯಲ್ಲಿ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ವಿವಿಧ ರೀತಿಯ ಕಾರ್ಯಕ್ರಮಗಳನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.






ತಿರಂಗಾ ಯಾತ್ರೆಯು ರಾಷ್ಟ್ರೀಯ ಐಕ್ಯತೆ ಮತ್ತು ಭಾವೈಕ್ಯತೆ ಸಾರುವ ಕೆಲಸ ಮಾಡುತ್ತಿದೆ.

ದೇಶದ ತ್ರಿವರ್ಣ ಧ್ವಜವು ಕೇಸರಿ ಬಣ್ಣ ತ್ಯಾಗ ಶೌರ್ಯಗಳ ಸಂಕೇತವಾದರೆ, ಬಿಳಿ ಶಾಂತಿಯ ಸಂಕೇತ ಹಾಗೂ ಹಸಿರು ಸಮೃದ್ಧಿಯ ಸಂಕೇತ ಸೂಚಿಸುತ್ತದೆ ಎಂದು ತಿಳಿಸಿದ ಅವರು, ರಾಷ್ಟ್ರೀಯ ಹಬ್ಬಗಳನ್ನು ಅರ್ಥಪೂರ್ಣವಾಗಿ ಹಾಗೂ ವಿಜೃಂಭಣೆಯಿಂದ ಆಚರಿಸಲಾಗುತ್ತದೆ ಎಂದು ಹೇಳಿದರು.

ತಿರಂಗಾ ಯಾತ್ರೆ ಜಾಥಾವು ನಗರದ ಒನಕೆ ಓಬವ್ವ ವೃತ್ತದಿಂದ ಪ್ರಾರಂಭವಾಗಿ ಮದಕರಿ ವೃತ್ತ, ಅಂಬೇಡ್ಕರ್ ವೃತ್ತದ ಮಾರ್ಗವಾಗಿ ನಗರದ ಹೊಳಲ್ಕೆರೆ ರಸ್ತೆಯ ನೀಲಕಂಠೇಶ್ವರ ದೇಗುಲದವರೆಗೆ ಸಾಗಿ ತದನಂತರ ಪುನಃ ಒನಕೆ ಓಬವ್ವ ವೃತ್ತದಲ್ಲಿ ಅಂತ್ಯಗೊಂಡಿತು. ಜಾಥಾದಲ್ಲಿ ದೇಶ ಭಕ್ತಿಯ ಘೋಷಣೆಗಳು ಹಾಗೂ ಸ್ವಾತಂತ್ರ್ಯ ಸೇನಾನಿಗಳಿಗೆ ಜೈಕಾರ ಕೂಗಿದರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಕೆ.ತಿಮ್ಮಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ಎಂ.ವಿ.ವೀಣಾ, ಸುಧಾ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

## ಫಾಸ್ಟ್ ನ್ಯೂಸ್

### ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಕ್ಕೆ ಆ.29ರಂದು ಚುನಾವಣೆ

» ಚಳ್ಳಕೆರೆ

ಚಳ್ಳಕೆರೆ ನಗರಸಭೆಯ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಕ್ಕೆ ಮೀಸಲಾತಿ ನಿಗದಿಗೊಳಿಸಿದ ಬೆನ್ನಲ್ಲೆ ಚುನಾವಣೆ ದಿನಾಂಕ ಪ್ರಕಟಗೊಂಡಿದ್ದು, ಚುನಾವಣಾಧಿಕಾರಿ ಉಪವಿಭಾಗಾಧಿಕಾರಿ ಕಾರ್ಯನಿರ್ವಹಿಸುವರು. ಕಳೆದ 2023ರ ಮೇ ತಿಂಗಳಲ್ಲಿ ನಗರಸಭೆಯ ಅಂದಿನ ಅಧ್ಯಕ್ಷರು, ಉಪಾಧ್ಯಕ್ಷರ ಅವಧಿ ಮುಕ್ತಾಯಗೊಂಡಿದ್ದು, ಸುಮಾರು ಒಂದು ವರ್ಷದ ನಂತರ ಮತ್ತೆ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಯಲಿದೆ. ಅಧ್ಯಕ್ಷ ಸ್ಥಾನ ಬಿಸಿಎಂ ಬಿ ಮಹಿಳೆಗೆ ಮೀಸಲಿದ್ದು, ಉಪಾಧ್ಯಕ್ಷ ಸ್ಥಾನ ಎಸ್ಸಿ ಮಹಿಳೆಗೆ ಮೀಸಲಿದೆ. ನಗರಸಭೆಯ ಅಧ್ಯಕ್ಷ, ಉಪಾಧ್ಯಕ್ಷ ಎರಡೂ ಸ್ಥಾನಗಳು ಮಹಿಳೆಯರ ಪಾಲಾಗಿವೆ. ಜಿಲ್ಲಾಧಿಕಾರಿಗಳ ಸೂಚನೆ ಮೇರೆಗೆ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಚುನಾವಣಾಧಿಕಾರಿಯಾಗಿ ನಿಯುಕ್ತಗೊಂಡಿದ್ದು ಆ.29ರ ಗುರುವಾರ ನಗರಸಭೆಯ ಸಭಾಂಗಣದಲ್ಲಿ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಯಲಿದೆ. ಆ.29ರ ಗುರುವಾರ ಬೆಳಗ್ಗೆ 10ರಿಂದ11ವರೆಗೆ ನಾಮಪತ್ರ ಸ್ವೀಕಾರ, ಮಧ್ಯಾಹ್ನ ಒಂದರಿಂದ1.05ವರೆಗೆ ನಾಮಪತ್ರ ಪರಿಶೀಲನೆ, 1.05ರಿಂದ1.15 ನಾಮಪತ್ರ ವಾಪಸ್ ಪಡೆಯಲು ಅವಕಾಶ, ಮದ್ಯಾಹ್ನ 1.20ಕ್ಕೆ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ ಪ್ರಕಟಣೆಯಾಗಲಿದೆ ಎಂದು ನಗರಸಭೆಯ ಮೂಲಗಳು ತಿಳಿಸಿವೆ.

### ಇಂದು 77ನೇ ಸ್ವಾತಂತ್ರ್ಯೋತ್ಸವ: ಶಾಸಕ ಟಿ.ರಘುಮೂರ್ತಿ ಅಧ್ಯಕ್ಷತೆ

» ಚಳ್ಳಕೆರೆ

ಪ್ರತಿವರ್ಷದಂತೆ ಈ ವರ್ಷವೂ ನಗರದ ಬಿಸಿನೀರು ಮುದ್ದಪ್ಪ ಸರ್ಕಾರಿ ಪ್ರೌಢಶಾಲಾ ಬಯಲುರಂಗಮಂದಿರ ಆವರಣದಲ್ಲಿ ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಂಡಿದ್ದು ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ, ಸಣ್ಣ ಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ವಹಿಸುವರು. ತಹಶೀಲ್ದಾರ್ ರೇಹಾನ್‌ಪಾಷ ಧ್ವಜಾರೋಹಣ ನೆರವೇರಿಸಲಿದ್ದು, ಮುಖ್ಯ ಅತಿಥಿಗಳಾಗಿ ಶಾಸಕರು, ವಿಧಾನಪರಿಷತ್ ಸದಸ್ಯರು, ಆಮಂತ್ರಿಸಲಾಗಿದೆ. ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ, ಸರ್ಕಾರಿ ನೌಕರರ ಸಂಘದ ಪಿ.ಎ.ಲಿಂಗೇಗೌಡ, ಟಿಎಪಿಸಿಎಂಎಸ್ ಅಧ್ಯಕ್ಷ ಸಿ.ವೀರಭದ್ರಬಾಬು, ನಗರಸಭಾ ಸದಸ್ಯರು, ನಾಮಿನಿ ಸದಸ್ಯರು, ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಭಾಗವಹಿಸುವರು.

### ಶಿವಮೊಗ್ಗ ಹಾಲು ಒಕ್ಕೂಟ ನಿರ್ದೇಶಕರ ಚುನಾವಣೆ: ಸಂಜೀವ ಮೂರ್ತಿಗೆ ಜಯ

» ಚಳ್ಳಕೆರೆ

ಸಹಕಾರಿ ಕ್ಷೇತ್ರದ ಹಿರಿಯ ದುರೀಣ ಬಿ.ಸಿ.ಸಂಜೀವಮೂರ್ತಿ ಶಿವಮೊಗ್ಗ ಹಾಲು ಒಕ್ಕೂಟದ ನಿರ್ದೇಶಕರ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ತಮ್ಮ ಎದುರಾಳಿ ಅಭ್ಯರ್ಥಿ ಸಿ.ವೀರಭದ್ರಬಾಬುರವರನ್ನು 42 ಮತಗಳ ಅಂತರದಿಂದ ಸೋಲಿಸಿ ಜಯಸಾಧಿಸಿದ್ದಾರೆ.

ಈ ಹಿಂದೆ ನಡೆದ ಚುನಾವಣೆಯಲ್ಲಿ ಭಾರಿ ಜಿದ್ದಾಜಿದ್ದಿ ಏರ್ಪಟ್ಟಿದ್ದು, ಕೇವಲ ನಾಲ್ಕು ಮತಗಳ ಅಂತರದಿಂದ ಸಿ.ವೀರಭದ್ರಬಾಬು ಜಯಸಾಧಿಸಿ ಸಂಜೀವಮೂರ್ತಿಯವರನ್ನು ಪರಾಭವಗೊಳಿಸಿದ್ದರು. ಆದರೆ, ಬುಧವಾರ ನಡೆದ ಮತದಾನ ಮತ್ತು ಮತ ಏಣಿಕೆಯಲ್ಲಿ ಬಿ.ಸಿ.ಸಂಜೀವಮೂರ್ತಿ 42 ಮತಗಳನ್ನು ಹೆಚ್ಚಿಗೆ ಪಡೆದು ಸಿ.ವೀರಭದ್ರಬಾಬುಗೆ ಸೋಲಿನ ರುಚಿ ಕಾಣಿಸಿದ್ದಾರೆ.

## ಹರ್ ಘರ್ ತಿರಂಗಾ ಅಭಿಯಾನಕ್ಕೆ ಚಾಲನೆ ; ಮಾಜಿ ಶಾಸಕರ ಮನೆ ಮೇಲೆ ಹಾರಿದ ಭಾವುಟ

» ಚಿತ್ರದುರ್ಗ

ನಮ್ಮ ದೇಶದಲ್ಲಿರುವ ವಿವಿಧ ಜಾತಿಗಳು, ಕಲೆ, ಸಂಸ್ಕೃತಿ, ಭಾಷೆ ಇತ್ಯಾದಿ ವಿಷಯಗಳನ್ನು ಒಂದೇ ವೇದಿಕೆಯಲ್ಲಿ ರಾಷ್ಟ್ರಧ್ವಜದ ಮೂಲಕ ಕಾಣಲು ಸಾಧ್ಯವಿದೆ ಎಂದು ಸಂಸದ ಗೋವಿಂದ ಕಾರಜೋಳ ತಿಳಿಸಿದರು.

ನಗರದ ಮಾಜಿ ಶಾಸಕರಾದ ಜಿ.ಎಚ್.ತಿಪ್ಪಾರೆಡ್ಡಿಯವರ ನಿವಾಸ ಮೇಲೆ 'ಹರ್ ಘರ್ ತಿರಂಗಾ ಅಭಿಯಾನಯಡಿಯಲ್ಲಿ ಭಾವುಟವನ್ನು ಹಾರಿಸಿ ಮಾತನಾಡಿದ ಅವರು, ಪ್ರತಿಯೊಬ್ಬರಲ್ಲೂ ದೇಶಾಭಿಮಾನ ಬೆಳೆಯಬೇಕು. ಸ್ವಾತಂತ್ರ್ಯ ಹೋರಾಟದಲ್ಲಿ ಬಲಿದಾನ ಮಾಡಿರುವ ಹುತಾತ್ಮರನ್ನು ನೆನೆಯಬೇಕು ಎಂಬ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಪ್ರತಿ ಮನೆ ಮೇಲೂ ಧ್ವಜ ಹಾರಿಸಿ ದೇಶಪ್ರೇಮ ಮೆರೆಯಿರಿ ಸ್ವಾತಂತ್ರ್ಯ ದಿನಾಚರಣೆ ವೇಳೆ ರಾಷ್ಟ್ರಧ್ವಜ ಹಾರಿಸಲು ಸೂಚನೆ ನೀಡಿದ್ದಾರೆ.



## ಮಳಿಗೆಗಳಿಗೆ ನುಗ್ಗಿದ ಮಳೆ, ನೀರಿನಲ್ಲಿ ತೇಲಿದ ಪಾತ್ರೆ, ಬಟ್ಟೆಗಳು

ಚಿತ್ರದುರ್ಗ: ನಗರದಲ್ಲಿ ಇಂದು ಬೆಳಗಿನ ಜಾವ ಸುರಿದ ಮಳೆಗೆ ಬಟ್ಟೆ, ಅಂಗಡಿ, ಬುಕ್ ಸ್ಟಾಲ್, ಸ್ಟೀಲ್ ಅಂಗಡಿ, ಪಾತ್ರೆ ಅಂಗಡಿ, ಮಡಿಕಲ್ ಸ್ಟೋರ್ ಗಳಿಗೆ ನೀರು ನುಗ್ಗಿದ್ದು ಅಂಗಡಿ ಒಳಗಿನ ವಸ್ತುಗಳು ನೀರಿನಲ್ಲಿ ಮಳುಗಡೆ ಆಗಿವೆ.



ಅಂಗಡಿ ಮುಗ್ಗಟ್ಟುಗಳ ಸೇಲ್ರ್ ಒಳಗೆ ನೀರು ನುಗ್ಗಿದ ಪರಿಣಾಮ ಅಂಗಡಿ ಮಾಲೀಕರಿಗೆ ಸಾಕಷ್ಟು ನಷ್ಟ ಉಂಟವಾಗಿದೆ. ಈ ಘಟನ ಸ್ಥಳಕ್ಕೆ ನಗರಸಭೆ ಆಯುಕ್ತೆ ರೇಣುಕಾ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು ಯಾವ ರೀತಿ ಕ್ರಮ ಕೈಗೊಳ್ಳುತ್ತಾರೆ ಎಂಬುದು ಕಾದು ನೋಡಬೇಕಿದೆ.

**ಪ್ರಮುಖ ಸುದ್ದಿ**

# ಚಿತ್ರದುರ್ಗ: 78ನೇ ಸ್ವಾತಂತ್ರ್ಯ ದಿನಾಚರಣೆಗೆ ಸಕಲ ಸಿದ್ಧತೆ

» ಚಿತ್ರದುರ್ಗ:

ಆಗಸ್ಟ್ 15ರಂದು ನಡೆಯಲಿರುವ 78ನೇ ಭಾರತ ಸ್ವಾತಂತ್ರ್ಯ ದಿನಾಚರಣೆಯನ್ನು ಸಂಭ್ರಮ, ಸಡಗರದಿಂದ ಆಚರಿಸಲು ಜಿಲ್ಲೆಯಾದ್ಯಂತ ಸಕಲ ರೀತಿಯಲ್ಲೂ ಸಿದ್ಧತೆ ನಡೆದಿದೆ.

ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಧ್ವಜಾರೋಹಣ ನೆರವೇರಲಿರುವ ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಜಿಲ್ಲಾಡಳಿತದ ವತಿಯಿಂದ ಏರ್ಪಡಿಸಲಾಗಿರುವ ಜಿಲ್ಲಾ ಮಟ್ಟದ ಸ್ವಾತಂತ್ರ್ಯ ದಿನಾಚರಣೆಗೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಮಂಗಳವಾರ ಬೆಳಗಿನ ಜಾವ ಮಳೆ ಸುರಿದ ಹಿನ್ನಲೆಯಲ್ಲಿ ಮೈದಾನವನ್ನು ಸಂಪೂರ್ಣವಾಗಿ ಸ್ವಚ್ಛಗೊಳಿಸಿ, ಪಥ ಸಂಚಲನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಸುಗಮವಾಗಿ ನಡೆಯಲು ಅನುವಾಗುವಂತೆ ಮಣ್ಣು ಹರಡುವ ಮೂಲಕ ಮೈದಾನವನ್ನು ಸಮತಟ್ಟುಗೊಳಿಸಲಾಗಿದೆ.ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಈ ಹಿಂದೆ ವಿವಿಧ ಇಲಾಖೆ ಅಧಿಕಾರಿಗಳ ಸಭೆ ಕರೆದು ಅರ್ಥಪೂರ್ಣ ಹಾಗೂ ವಿಜೃಂಭಣೆಯಿಂದ ಸ್ವಾತಂತ್ರ್ಯ ದಿನಾಚರಣೆ ಆಚರಿಸುವಂತೆ ಚರ್ಚಿಸಲಾಗಿದ್ದು, ಅಚ್ಚುಕಟ್ಟಾಗಿ ಕಾರ್ಯಕ್ರಮ ಆಯೋಜನೆಗೆ ಕ್ರಮವಹಿಸಲಾಗುತ್ತಿದೆ.



ಜಿಲ್ಲಾ ಮಟ್ಟದ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮವು ಇದೇ ಆಗಸ್ಟ್ 15ರಂದು ಬೆಳಿಗ್ಗೆ 9ಕ್ಕೆ ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ನೆರವೇರಲಿದ್ದು, ರಾಷ್ಟ್ರಧ್ವಜಾರೋಹಣವನ್ನು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರು ನೆರವೇರಿಸಿ, ಸ್ವಾತಂತ್ರ್ಯೋತ್ಸವ ಸಂದೇಶ ನೀಡುವರು. ಸ್ವಾತಂತ್ರ್ಯೋತ್ಸವ ಆಚರಣೆಗೆ ಸಂಬಂಧಿಸಿದಂತೆ ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಸಮಿತಿಗಳು ತಮ್ಮ ಹಂತದಲ್ಲಿ ಈಗಾಗಲೇ ಸಭೆ ನಡೆಸಿ ಭಾರತ ಸ್ವಾತಂತ್ರ್ಯೋತ್ಸವದ ಎಲ್ಲ ಕಾರ್ಯಕ್ರಮಗಳನ್ನು ಯೋಜಿತವಾಗಿ ರೂಪಿಸಿಕೊಂಡು ಅಚ್ಚುಕಟ್ಟಾಗಿ ನಿರ್ವಹಿಸಲಾಗುತ್ತಿದೆ.

ಸ್ವಾತಂತ್ರ್ಯೋತ್ಸವ ಕಾರ್ಯಕ್ರಮ ನಡೆಯುವ ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಸ್ವಾಗತ ಕಮಾನು ವ್ಯವಸ್ಥೆ, ದೀಪಾಲಂಕಾರ, ಧ್ವನಿವರ್ಧಕ ಮತ್ತು ಕುಡಿಯುವ ನೀರು ವ್ಯವಸ್ಥೆ, ತೋಟಗಾರಿಕೆ ಇಲಾಖೆಯಿಂದ ವಿವಿಧ ಬಗೆಯ ಆಕರ್ಷಣೆಯ ಹೂವಿನ ಕುಂಡಗಳನ್ನು ವೇದಿಕೆ ಹಾಗೂ ಧ್ವಜಸ್ತಂಭದ ಸುತ್ತಲು ಸಿಂಗರಿಸಿದ್ದಾರೆ. ಜನಪ್ರತಿನಿಧಿಗಳು, ಅಧಿಕಾರಿಗಳು, ಮಾಧ್ಯಮದವರು, ಸಾರ್ವಜನಿಕರು ಆಸಿನರಾಗಲು ಪ್ರತ್ಯೇಕವಾಗಿ ಸೂಕ್ತ ಆಸನದ ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಮೈದಾನದಲ್ಲಿ ಅಗತ್ಯಕ್ಕೆ ಅನುಸಾರವಾಗಿ ತಾತ್ಕಾಲಿಕವಾಗಿ ಮೊಬೈಲ್ ಶೌಚಾಲಯದ ವ್ಯವಸ್ಥೆ ಮಾಡಲಾಗಿದೆ.

ಪಥ ಸಂಚಲನಕ್ಕೆ ಪೊಲೀಸ್ ಸಿಬ್ಬಂದಿ, ಹೋಂ ಗಾರ್ಡ್, ಅರಣ್ಯ ಇಲಾಖೆ, ಅಬಕಾರಿ, ಎನ್‌ಸಿಸಿ ಹಾಗೂ ಪ್ರೌಢಶಾಲಾ ಮಕ್ಕಳು ಸೇರಿದಂತೆ ಉತ್ತಮ ತುಕಡಿಗಳನ್ನು ಪರೇಡ್ ವ್ಯವಸ್ಥೆಗೆ ಸಜ್ಜುಗೊಳಿಸಲಾಗಿದ್ದು, ಪಥಸಂಚಲನದಲ್ಲಿ ಭಾಗಹಿಸುವ ತಂಡಗಳಿಗೆ ಈಗಾಗಲೇ ಉತ್ತಮವಾಗಿ ತರಬೇತಿ ನೀಡಿ, ಪಥಸಂಚಲನವನ್ನು ಬಹಳ ಶಿಸ್ತಿನಿಂದ ನಡೆಸಲು ಅಂತಿಮ ಹಂತದ ತಾಲೀಮು ನಡೆಸಿದ್ದಾರೆ.

ಜಿಲ್ಲಾಧಿಕಾರಿ ಟಿ. ವೆಂಕಟೇಶ್, ನಗರಸಭೆ ಪೌರಾಯುಕ್ತೆ ರೇಣುಕಾ ಅವರು ಬುಧವಾರದಂದು ಮಧ್ಯಾಹ್ನ ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನಕ್ಕೆ ಭೇಟಿ ನೀಡಿ, ಕ್ರೀಡಾಂಗಣದಲ್ಲಿ ನಡೆಯುತ್ತಿದ್ದ ಸಿದ್ಧತೆಯ ಪರಿಶೀಲನೆ ನಡೆಸಿದರು.ದಸರ್ಕಾರಿ ಕಚೇರಿ ಕಟ್ಟಡಗಳಿಗೆ ವಿದ್ಯುತ್ ದೀಪಾಲಂಕಾರ: ಜಿಲ್ಲೆಯಲ್ಲಿರುವ ವಿವಿಧ ಸರ್ಕಾರಿ ಕಚೇರಿಗಳಿಗೆ ವಿದ್ಯುತ್ ದೀಪದಿಂದ ಅಲಂಕಾರ ಮಾಡಲಾಗಿದೆ. ಜಿಲ್ಲಾಧಿಕಾರಿಗಳ ಕಚೇರಿ, ಲೋಕೋಪಯೋಗಿ ಇಲಾಖೆ ಸೇರಿದಂತೆ ವಿವಿಧ ಸರ್ಕಾರಿ ಕಚೇರಿಗಳು ಹಾಗೂ ನಗರದ ವಿವಿಧ ವೃತ್ತಗಳಲ್ಲಿ ವಿದ್ಯುತ್ ದೀಪದಿಂದ ಅಲಂಕಾರ ಮಾಡಿದ್ದಾರೆ.

ಜಿಲ್ಲೆಯಾದ್ಯಂತ ಹರ್ ಘರ್ ತಿರಂಗಾ ಅಭಿಯಾನ: ಭಾರತ ಸ್ವಾತಂತ್ರ್ಯೋತ್ಸವದ ಅಂಗವಾಗಿ ಹರ್ ಘರ್ ತಿರಂಗಾ ಅಭಿಯಾನವನ್ನು ಜಿಲ್ಲೆಯಾದ್ಯಂತ ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ. ಬೈಕ್ ರ್‍ಯಾಲಿ, ತಿರಂಗಾಯಾತ್ರೆಸೇರಿದಂತೆವಿವಿಧರೀತಿಯ ಜಾಥಾ ಕಾರ್ಯಕ್ರಗಳನ್ನು ಆಯೋಜಿಸುವ ಮೂಲಕ ಹರ್ ಘರ್ ತಿರಂಗಾ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ.

## ಫಾಸ್ಟ್ ನ್ಯೂಸ್

### ಸ್ವಾತಂತ್ರ್ಯ ದಿನಾಚರಣೆ, ಪ್ರತಿಭಾ ಪುರಸ್ಕಾರ

» ದಾವಣಗೆರೆ

ದಾವಣಗೆರೆ ಜಿಲ್ಲಾ ವಕೀಲರ ಸಂಘ ಹಾಗೂ ಜಿಲ್ಲಾ ನ್ಯಾಯಾಂಗ ಇಲಾಖೆಯಿಂದ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ 2023–24ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತಿಹೆಚ್ಚು ಅಂಕ ಗಳಿಸಿರುವ ವಕೀಲರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡುವ ಕಾರ್ಯಕ್ರಮವನ್ನು ವಕೀಲರ ಸಾಂಸ್ಕೃತಿಕ ಸಭಾ ಭವನದಲ್ಲಿ ಆಗಸ್ಟ್ 15ರಂದು ಹಮ್ಮಿಕೊಳ್ಳಲಾಗಿದೆ.ಬೆಳಿಗ್ಗೆ 8ಕ್ಕೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ಧ್ವಜಾರೋಹಣ ನೆರವೇರಿಸುವರು. ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಹೆಚ್. ಅರುಣ್‌ಕುಮಾರ್ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಂಜಪ್ಪ ಹನುಮಂತಪ್ಪ ಅಣ್ಣಯ್ಯನವರ, 2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದಆರ್.ಎನ್.ಪ್ರವೀಣ್‌ಕುಮಾರ್, ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಎಸ್‌ಟಿಎಫ್‌ಸಿ ನ್ಯಾಯಾಧೀಶರಾದ ಶ್ರೀರಾಮ ನಾರಾಯಣ ಹೆಗಡೆ, ಕೌಟುಂಬಿಕ ನ್ಯಾಯಾಲಯದ ಜಿಲ್ಲಾ ನ್ಯಾಯಾಧೀಶರಾದ ಶಿವಪ್ಪ ಗಂಗಪ್ಪ ಸಲಗರೆ, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರಾದ ಟಿ.ಎಂ.ನಿವೇದಿತಾ ಆಗಮಿಸಲಿದ್ದಾರೆ ಎಂದು ವಕೀಲರ ಸಂಘ ತಿಳಿಸಿದೆ.

### ಮಾಜಿ ಶಾಸಕರ ಮನೆ ಮೇಲೆ ಹಾರಿದ ಭಾವುಟ

» ಮೊದಲ ಪುಟದಿಂದ

ಭಾರತ ದೇಶವನ್ನು ಸ್ವಾತಂತ್ರ್ಯಗೊಳಿಸಲು ತಮ್ಮ ಪ್ರಾಣ ಪಣಕ್ಕಿಟ್ಟು ಹುತಾತ್ಮರಾದ ಸೈನಿಕರಿಗೆ ಗೌರವ ಸಮರ್ಪಣೆ ಮಾಡುವ ಸಲುವಾಗಿ ಎಲ್ಲಾ ಮನೆಗಳ ಮೇಲೆ ಆಗಸ್ಟ್ 15 ರಂದು ತ್ರಿವರ್ಣ ಧ್ವಜ ಹಾರಿಸಿ ಸಂಭ್ರಮಾಚರಣೆ ಮಾಡಬೇಕು ಎಂದು ಸಾರ್ವಜನಿಕರಿಗೆ ಕರೆ ನೀಡಿ 78ನೇ ಭಾರತ ಸ್ವಾತಂತ್ರ್ಯೋತ್ಸವದ ಅಂಗವಾಗಿ ಎಲ್ಲಾ ಮನೆಗಳ ಮೇಲೆ ರಾಷ್ಟ್ರಧ್ವಜ ಹಾರಿಸಿ ರಾಷ್ಟ್ರ ಪ್ರೇಮ ಮೆರೆಯಲು ಹರ್‌ಘರ್‌ತಿರಂಗಾ ಅಭಿಯಾನವನ್ನು ಪ್ರತಿಯೊಬ್ಬ ವ್ಯಕ್ತಿಗೂ ತಲುಪುವಂತೆ ನೋಡಿಕೊಳ್ಳಬೇಕು ಆ.15ರಂದು ತಳಿರು ತೋರಣಗಳಿಂದ ಸುಸಜ್ಜಿತಗೊಳಿಸುವ ಮೂಲಕ ಹಬ್ಬದ ವಾತಾವರಣ ಸೃಷ್ಟಿಸಬೇಕು ಹಾಗೂ ಬಟ್ಟೆಯಿಂದ ಅಥವಾ ಪರಿಸರ ಸ್ನೇಹಿ ವಸ್ತುಗಳಿಂದ ತಯಾರಿಸಲಾದ ಬಾವುಟಗಳನ್ನು ಮಾತ್ರ ಹಾರಿಸಲು ಮನವಿ ಮಾಡಿದರು. ಮಾಜಿ ಶಾಸಕರಾದ ಜಿ ಹೆಚ್‌ತಿಪ್ಪಾರೆಡ್ಡಿ ಮಾತನಾಡಿ, ದೇಶಕ್ಕೆ ಸ್ವಾತಂತ್ರ ಬಂದು 78 ವರ್ಷಗಳಾಗಿದೆ. ನಮ್ಮ ಜನತೆ ಬ್ರಿಟಿಷರನ್ನು ತೊಲಗಿಸಿ ದೇಶಕ್ಕೆ ಸ್ವಾತಂತ್ರ್ಯವನ್ನು ತರುವಲ್ಲಿ ಅನೇಕರು ತಮ್ಮ ಪ್ರಾಣವನ್ನು ನೀಡಿ ನಮಗೆ ಸ್ವಾತಂತ್ರ ಭಾರತವನ್ನು ನೀಡಿದ್ದಾರೆ. ಪ್ರಧಾನ ಮಂತ್ರಿಯವರು ಕರೆಯನ್ನು ನೀಡಿದ್ದಾರೆ. ಕನ್ಯಾಕುಮಾರಿಯಿಂದ ಹಿಡಿದು ಹಿಮಾಲಯದವರೆಗೂ ಪ್ರತಿಯೊಬ್ಬರ ಮನೆಯ ಮೇಲೆ ಸರ್ಕಾರಿ ಕಚೇರಿಯ ಮೇಲೆ ದೇಶದ 140 ಕೋಟಿ ಜನರ ಮನೆಯ ಮೇಲೆ ತ್ರಿವರ್ಣ ಧ್ವಜವನ್ನು ಹಾರಿಸುವುದರ ಮೂಲಕ ದೇಶ ಭಕ್ತಿಯನ್ನು ತೋರಿಸುವ ಕಾರ್ಯವನ್ನು ಮಾಡಬೇಕಿದೆ. ಇದ್ದಲ್ಲದೆ ಖಾಸಗಿಯಾಗಿಯೂ ಸಹಾ ಮನೆಯ ಮೇಲೆ ಧ್ವಜವನ್ನು ಹಾರಿಸುವ ಕಾರ್ಯವನ್ನು ಮಾಡಬೇಕಿದೆ ಎಂದರು. ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷರಾದ ಎ.ಮುರಳಿ, ನಗರಾಭೀವೃದ್ಧಿ ಪಾಧಿಕಾರ ಮಾಜಿ ಅಧ್ಯಕ್ಷ ಸುರೇಶ್ ಸಿದ್ದಾಪುರ, ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ್, ಮುಖಂಡರಾದ ಡಾ.ಸಿದ್ಧಾರ್ಥ, ನಗರಾಧ್ಯಕ್ಷ ನವೀನ್ ಚಾಲುಕ್ಯ, ಗ್ರಾಮಾಂತರ ಅಧ್ಯಕ್ಷ ಕಲ್ಲೇಶಯ್ಯ, ರೈತ ಮೋರ್ಚಾದ ಅಧ್ಯಕ್ಷ ವೆಂಕಟೇಶ್ ಯಾದವ್,ಶಿವಣ್ಣಚಾರ್, ಶೇಷಣ್ಣರೆಡ್ಡಿ, ನಾಗರಾಜ್, ನಗರಸಭಾ ಸದಸ್ಯರಾದ ಹರೀಶ್ ಬಿ.ಸುರೇಶ್ ಮಾಜಿ ಸದಸ್ಯರಾದ ರವಿಶಂಕರ್, ಮಹಿಳಾ ಘಟಕದ ಅಧ್ಯಕ್ಷರಾದ ಶ್ರೀಮತಿ ಶೈಲಜಾರೆಡ್ಡಿ, ಮಹಿಳಾ ಮಣಿಗಳಾದ ಕಾಂಚನ, ರೇಖಾ, ಭಾರತಿ, ವೀಣಾ, ಶಾಂತಮ್ಮ, ಪವಿತ್ರಾ, ರಾಗಿಣಿ ಸೇರಿದಂತೆ ಇತರರು ಭಾಗವಹಿಸಿದ್ದರು.

### ವಿದ್ಯಾಸಿರಿ ಸೌಲಭ್ಯಕ್ಕೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2024–25ನೇ ಸಾಲಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ ಮತ್ತುವಿದ್ಯಾಸಿರಿಸೌಲಭ್ಯಕ್ಕೆಅರ್ಜಿಆಹ್ವಾನಿಸಲಾಗಿದೆ. ಪಿಯುಸಿ ಮತ್ತು ಪಿಯು ಸಮನಾಂತರ, ಸಾಮಾನ್ಯ ಪದವಿ ಮತ್ತು ಸಂಯೋಜಿತ ಉಭಯ ಪದವಿ ಕೋರ್ಸುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರಲ್ಲಿ ಬರುವ ಅಲೆಮಾರಿ–ಅರೆಅಲೆಮಾರಿ ವಿದ್ಯಾರ್ಥಿಗಳು https://ssp.postmetric.karnataka.gov.in/ ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 15 ಕಡೆಯ ದಿನವಾಗಿದೆ. ವಿದ್ಯಾರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಮಾಹಿತಿಗಾಗಿ ವೆಬ್‌ಸೈಟ್ https://bcwd.karntaka.gov.in ಗೆ ಭೇಟಿ ನೀಡಬಹುದು. ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಸಹಾಯವಾಣಿಸಂಖ್ಯೆ8050770005,ಇ–ಮೇಲ್ bcwshelpline@gmail.com ಮತ್ತು ರಾಜ್ಯ ವಿದ್ಯಾರ್ಥಿವೇತನ ಸಹಾಯವಾಣಿ ಇಮೇಲ್ postmetrichelp@karnataka.gov.in ಹಾಗೂ ದೂರವಾಣಿ ಸಂಖ್ಯೆ 1902 ಗೆ ಸಂಪರ್ಕಿಸಬಹುದು.

# ದೇಶದ ಸ್ವಾತಂತ್ರ್ಯಕ್ಕೆ ಹೋರಾಡಿದ ಮಹಾನ್ ಚೇತನಗಳ ಸ್ಮರಣೆ: ಸಂಸದ ಗೋವಿಂದ ಕಾರಜೋಳ

» ಚಿತ್ರದುರ್ಗ

78ನೇ ಸ್ವಾತಂತ್ರ್ಯ ಮಹೋತ್ಸವವನ್ನು ಇಡೀ ರಾಷ್ಟ್ರದಲ್ಲಿ ಮೂರು ದಿನಗಳ ಕಾಲ ವಿಜೃಂಭಣೆಯಿಂದ ಆಚರಿಸಲಾಗುತ್ತದೆ. ಸ್ವಾತಂತ್ರ್ಯಕ್ಕೆ ಹೋರಾಡಿದ ಮಹಾನ್ ಚೇತನಗಳನ್ನು ಸ್ಮರಿಸಿಕೊಳ್ಳುವುದರ ಮೂಲಕ, ಅವರ ತ್ಯಾಗ ಬಲಿದಾನದ ಬಗ್ಗೆ ನಾಟಕ ರೂಪದಲ್ಲಿ ಯುವ ಜನರಿಗೆ ತಿಳಿಸುವ ಕೆಲಸ ಮಾಡಲಾಗುತ್ತಿದೆ ಎಂದು ಸಂಸದ ಗೋವಿಂದ ಎಂ ಕಾರಜೋಳ ಹೇಳಿದರು.

78ನೇ ಸ್ವಾತಂತ್ರ್ಯ ಮಹೋತ್ಸವ ಹಾಗೂ ಹರ್ ಘರ್ ತಿರಂಗಾ ಕಾರ್ಯಕ್ರಮದ ಅಂಗವಾಗಿ ನವದೆಹಲಿಯ ಕೇಂದ್ರ ಸಂಸ್ಕೃತಿ ಮಂತ್ರಾಲಯ, ತಾಂಜಾವೂರಿನ ದಕ್ಷಿಣ ವಲಯ ಸಾಂಸ್ಕೃತಿಕ ಕೇಂದ್ರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಬುಧವಾರ ಸಂಜೆ ನಗರದ ತರಾಸು ರಂಗಮಂದಿರದಲ್ಲಿ ಆಯೋಜಿಸಲಾದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ನಾಟಕ ಹಾಗೂ ದೇಶಭಕ್ತಿ ಗೀತೆ ಗಾಯನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ದೇಶಕ್ಕಾಗಿ ಹೋರಾಡಿದ ಸೇನಾನಿ ಹಾಗೂ ಯೋಧರು, ಕಲೆ, ಕ್ರೀಡೆ ಸೇರಿದಂತೆ ಇನ್ನಿತರ ಕ್ಷೇತ್ರದಲ್ಲಿ ಸಾಧನೆ ಮಾಡಿದವರನ್ನು ಗುರುತಿಸಿ ಸ್ವಾತಂತ್ರ್ಯ





ಮಹೋತ್ಸವ ಸಂದರ್ಭದಲ್ಲಿ ಸನ್ಮಾನಿಸಿ ಗೌರವಿಸಲಾಗುತ್ತಿದೆ. ಈ ಮೂಲಕ ಇನ್ನಷ್ಟು ಸಾಧನೆ ಮಾಡಲು ಪ್ರೇರೇಪಿಸಲಾಗುತ್ತಿದೆ. ನಾಡಿನ ಪರಂಪರೆ ಕಲೆ ಸಂಸ್ಕೃತಿಗಳನ್ನು ಅನಾವರಣೆ ಮಾಡಲು ಅನೇಕ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ. ಹರ್ ಘರ್ ತಿರಂಗಾ ಎನ್ನುವ ಪ್ರಧಾನಿ ನರೇಂದ್ರ ಮೋದಿ ಅವರ ಕರೆಗೆ ಓಗೊಟ್ಟು, ದೇಶದ ಜನತೆ ತಮ್ಮ ಮನೆಗಳ ಮೇಲೆ ರಾಷ್ಟ್ರಧ್ವಜ ಹಾರಿಸಿ ದೇಶಪ್ರೇಮ ಮೆರೆದಿದ್ದಾರೆ ಎಂದು ಸಂಸದ ಗೋವಿಂದ ಎಂ ಕಾರಜೋಳ ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರ ಸ್ವಾಮಿ ಮಾತನಾಡಿ, ಮನೆಗಳ ಮೇಲೆ ರಾಷ್ಟ್ರಧ್ವಜ ಹಾರಿಸುವುದರೊಂದಿಗೆ ನಮ್ಮ ಮನಗಳಲ್ಲಿಯೂ ರಾಷ್ಟ್ರಭಕ್ತಿ ಅನಾವರಣ ಆಗಬೇಕು. ದೇಶದ ಸಂವಿಧಾನಕ್ಕೆ ಗೌರವ ಸಲ್ಲಿಸುವುದರ ಜೊತೆಗೆ, ದೇಶದ ಪ್ರತಿಯೊಬ್ಬರನ್ನು ಪ್ರೇಮದಿಂದ ಕಂಡು ಭಾವೈಕ್ಯತೆ ಮನೋಭಾವ ಅಳವಡಿಸಿಕೊಳ್ಳುವಂತೆ ಕರೆ ನೀಡಿದರು.

ದೇಶಪ್ರೇಮ ಹಾಗೂ ದೇಶಭಕ್ತಿ ಅನುರಣಿಸಿದ ಗೀತ ಗಾಯನ: ಕಾರ್ಯಕ್ರಮದಲ್ಲಿ ವಿವಿಧ ಕಲಾತಂಡಗಳಿಂದ ಪ್ರಸ್ತುತ ಪಡಿಸಿದ ದೇಶಭಕ್ತಿ ಗೀತೆಗಳು ನೆರೆದವರಲ್ಲಿ ದೇಶಪ್ರೇಮ ಹಾಗೂ ದೇಶಭಕ್ತಿ ಅನುರಣಿಸುವಂತೆ ಮಾಡಿದವು. ಗಾಯಕರ ಜೊತೆ ಸಭಿಕರು ಸಹ ದೇಶ ಭಕ್ತಿಗೀತೆಗಳಿಗೆ ಧ್ವನಿಗೂಡಿಸಿದರು. ಇದೇ ಸಂದರ್ಭದಲ್ಲಿ ವೀರ ಸಂಗೊಳ್ಳಿ ರಾಯಣ್ಣ ನಾಟಕ ಪ್ರದರ್ಶಿಸಲಾಯಿತು.

ಕಾರ್ಯಕ್ರಮದಲ್ಲಿಜಿಲ್ಲಾವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ್, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಸಾಂಸ್ಕೃತಿಕ ಸಂಘಟಕ ಮಂಜುನಾಥ್, ಕಲಾವಿದರಾದ ಡಿ.ಓ.ಮುರಾರ್ಜಿ, ಹರೀಶ್, ಶೋಭಾರಾಣಿ ಇದ್ದರು.

## ಪೊಲೀಸ ಮಧ್ಯ ಪ್ರವೇಶದಿಂದ ಜನರ ಸಮಸ್ಯೆ ಪರಿಹಾರ
# ಬಸ್ ಸೌಲಭ್ಯಕ್ಕಾಗಿ ಚಿಕ್ಕಹಳ್ಳಿ ಗ್ರಾಮಸ್ಥರ ಪ್ರತಿಭಟನೆ

» ಚಳ್ಳಕೆರೆ

ಚಳ್ಳಕೆರೆ ತಾಲ್ಲೂಕಿನ ಗ್ರಾಮಾಂತರ ಪ್ರದೇಶಗಳಿಗೆ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಕೆಲವೊಂದು ಮಾರ್ಗಗಳಲ್ಲಿ ಸಮರ್ಪಕವಾಗಿ ಬಸ್‌ಗಳ ಸೇವೆಯನ್ನು ಒದಗಿಸುತ್ತಿದ್ದರೂ ತಳಕು ಹೋಬಳಿ ಹಿರೇಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಿಕ್ಕಹಳ್ಳಿ ಹಾಗೂ ಇನ್ನಿತರ 10ಕ್ಕೂ ಹಳ್ಳಿಗಳಿಗೆ ಮಾತ್ರ ಬಸ್ ಸೌಕರ್ಯವಿಲ್ಲದೆ ಜನರು ಪರದಾಡುವ ಸ್ಥಿತಿ ಉಂಟಾಗಿದೆ.

ನಗರದ ಕೆಎಸ್‌ಆರ್‌ಟಿಸಿ ಬಸ್ ಬಸ್ಟಾಂಡ್‌ನಲ್ಲಿ ಬುಧವಾರ ಮಧ್ಯಾಹ್ನದಿಂದಲೇ ಚಿಕ್ಕಹಳ್ಳಿ, ಬಂಜಿಗೆರೆ, ವಲಸೆ, ತಿಮ್ಮನಹಳ್ಳಿ, ಅಜ್ಜನಹಳ್ಳಿ, ಚನ್ನಗಾನಹಳ್ಳಿ, ತಳಕು ಮುಂತಾದ ಗ್ರಾಮಗಳಿಗೆ ತೆರಳಲು ಬಸ್ಸಿಗಾಗಿ ಕಾಯುತ್ತಿದ್ದರು. ಆದರೆ, ಸಂಜೆ 7 ಗಂಟೆಯಾದರೂ ಚಿಕ್ಕಹಳ್ಳಿಯ ಬಸ್ ಬರಲಿಲ್ಲ. ಅಲ್ಲಿನ ಸಂಚಾರಿ ನಿಯಂತ್ರಕರನ್ನು ಕೇಳಿದರೆ ಬಸ್ ಕೆಟ್ಟಿದೆ ಎಂದು ಉತ್ತರ ನೀಡಿದರು. ಇದರಿಂದ ಅಸಮದಾನಗೊಂಡ ಹಲವಾರು ಪ್ರಯಾಣಿಕರು ನಮ್ಮ ಗ್ರಾಮಕ್ಕೆ ಬಸ್ ಬಿಡದ ಹೊರತು ಬೇರೆ ಯಾವುದೇ ಊರಿಗೆ ಬಸ್ ಹೋಗಬಾರದು ಎಂದು ಗಲಾಟೆ ಆರಂಭಿಸಿದರಲ್ಲದೆ, ಬೇರೆ ಕಡೆ ತೆರಳುವ ಬಸ್‌ಗಳನ್ನು ತಡೆದು ನಿಲ್ಲಿಸಿದರು. ಒಂದು ಗ್ರಾಮಕ್ಕೆ ಬಸ್ ಸೌಲಭ್ಯವಿಲ್ಲದ ಪ್ರಯುಕ್ತ



ಬೇರೆ ಊರುಗಳಿಗೆ ತೆರಳುವ ಪ್ರಯಾಣಿಕರಿಗೂ ಸಹ ತೊಂದರೆ ಉಂಟಾಯಿತು. ಕೂಡಲೇ ಪೊಲೀಸ್ ಆಗಮಿಸಿ ಜನರನ್ನು ಸಮದಾನ ಪಡಿಸಿದರು.

ಅಷ್ಟರಲ್ಲೇ ಡಿಪೋ ವ್ಯವಸ್ಥಾಪಕ ಪ್ರಭು ಚಿಕ್ಕಹಳ್ಳಿ ಮಾರ್ಗದ ಬಸ್ ದುರಸ್ಥಿಯಾಗದ ಕಾರಣ ಬದಲಿ ಬಸ್ ವ್ಯವಸ್ಥೆಯನ್ನು ಮಾಡಿ ಪ್ರಯಾಣಿಕರನ್ನು ಕಳಿಸಿಕೊಟ್ಟರು. ಗ್ರಾಮಸ್ಥರಾದ ಚಿಕ್ಕಣ್ಣ, ಹರೀಶ್, ಅನುಸೂಯಮ್ಮ ಮುಂತಾದವರು ಮಾತನಾಡಿ, ಪ್ರತಿನಿತ್ಯವೂ ಆ ಭಾಗದ ಜನರು ಇದೇ ಸಮಸ್ಯೆ ಅನುಭವಿಸಬೇಕಿದೆ. ಕೆಎಸ್‌ಆರ್‌ಟಿಸಿ ಹಿರಿಯ ಅಧಿಕಾರಿಗಳು ಈ ಬಗ್ಗೆ ಗಮನಹರಿಸಬೇಕು ಎಂದರು. ವಿದ್ಯಾರ್ಥಿಗಳಿಗೆ, ಮಹಿಳೆಯರಿಗೆ ಕೂಲಿಕಾರ್ಮಿಕರಿಗೆ ಸಮಸ್ಯೆ ಉಂಟಾಗಿದ್ದು ಕೂಡಲೇ ಪರಿಹಾರ ನೀಡಿ ಎಂದು ಆಗ್ರಹಿಸಿದರು.

## ಶ್ರೀನೀಲಕಂಠೇಶ್ವರ ದೇವಾಲಯದ ಗೋಪುರ, ಕಳಸ ಸ್ಥಾಪನೆ 19ರಂದು.





» ಚಳ್ಳಕೆರೆ

ತಳಕು ಹೋಬಳಿಯ ಕಾಲುವೇಹಳ್ಳಿ ಗ್ರಾಮದ ಶ್ರೀ ನೀಲಕಂಠೇಶ್ವರಸ್ವಾಮಿ ದೇವಾಲಯದ ಜೀರ್ಣೋದ್ಧಾರ ಮತ್ತು ಗೋಪುರಕ್ಕೆ ಕಳಸ ಸ್ಥಾಪನೆ ಕಾರ್ಯಕ್ರಮ ಆ.19ರ ಸೋಮವಾರ ನಡೆಯಲಿದ್ದು, ಮುಸ್ಟೂರು ಓಂಕಾರೇಶ್ವರಮಠದ ಚರಮತ್ತು ಸ್ಥಿರಪಟ್ಟಾಧ್ಯಕ್ಷರಾದ ಶ್ರೀರುದ್ರಮುನಿ ಶಿವಾಚಾರ್ಯಮಹಾಸ್ವಾಮಿಗಳು ಕಳಸ್ಥಾಪನೆ ಕಾರ್ಯಕ್ರಮ ನರವೇರಿಸುವ ಎಂದು ಆಡಳಿತ ಮಂಡಳಿ ತಿಳಿಸಿದರು.

ಸೋಮವಾರ ನಡೆಯುವ ಗೋಪುರ ಕಳಸ್ಥಾಪನೆ ಕಾರ್ಯಕ್ರಮ ಹಿನ್ನೆಲೆಯಲ್ಲಿ ಬುಧವಾರ ಗ್ರಾಮಕ್ಕೆ ಆಗಮಿಸಿದ ಕಳಸವನ್ನು ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆಯೊಂದಿಗೆ ಕಳಸವನ್ನು ದೇವಸ್ಥಾನಕ್ಕೆ ತೆಗೆದುಕೊಂಡು ಹೋಗಲಾಯಿತು. ಈ ಸಂದರ್ಭದಲ್ಲಿ ನೂರಾರು ಭಕ್ತರು ಪಾಲ್ಗೊಂಡಿದ್ದರು. ಆಗಮ ಪಂಡಿತ ಡಾ.ವೀರೇಶ್ ಹಿರೇಮಠ ನೇತೃತ್ವದಲ್ಲಿ ಪೂಜಾ ಕಾರ್ಯಗಳು ನಡೆಯಲಿವೆ. 17ರಿಂದ19ವರೆಗೂ ಮೂರು ದಿನಗಳ ಕಾಲ ನಡೆಯುವ ಪೂಜಾ ಕಾರ್ಯಕ್ರಮಗಳಿಗೆ ಹೆಚ್ಚಿನ ಭಕ್ತರು ಆಗಮಿಸಿ ಶ್ರೀಸ್ವಾಮಿಯ ಕೃಪೆಗೆ ಪಾತ್ರರಾಗಬೇಕೆಂದು ಮನವಿ ಮಾಡಿದ್ದಾರೆ.

## ನಶಾಮುಕ್ತ ಭಾರತ ಅಭಿಯಾನ ಯೋಜನೆ: ಸಸಿ ನೆಡುವ ಕಾರ್ಯಕ್ರಮ

ಚಿತ್ರದುರ್ಗ: 78ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ನಶಾಮುಕ್ತ ಭಾರತ ಅಭಿಯಾನದಡಿ, ನಗರದ ಶ್ರೀ ನೀಲಕಂಠೇಶ್ವರ ಮೆಮೋರಿಯಲ್ ಪದವಿ ಪೂರ್ವ ಕಾಲೇಜಿನಲ್ಲಿ ಬುಧವಾರ ಸಸಿ ನೆಡುವ ಕಾರ್ಯಕ್ರಮ ಜರುಗಿತು. ಈ ಸಂದರ್ಭದಲ್ಲಿ ಡೇಟಾ ಚಾರಿಟಬಲ್ ಸೊಸೈಟಿ ಅಧ್ಯಕ್ಷ ಡಾ.ಹೆಚ್.ಎಸ್.ಶಿವಣ್ಣ, ನೀಲಕಂಠೇಶ್ವರ ಮೆಮೋರಿಯಲ್ ಪದವಿ ಪೂರ್ವ ಕಾಲೇಜ್‌ನ ಪ್ರಾಂಶುಪಾಲ ದುರುಗೇಶಪ್ಪ ಹಾಗೂ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



**ಪ್ರಮುಖ ಸುದ್ದಿ**

# ತೀವ್ರ ಅತಿಸಾರ ಭೇದಿ ನಿಯಂತ್ರಣಕ್ಕೆ ಓಆರ್‌ಎಸ್ ಪರಿಣಾಮಕಾರಿ

» ಚಿತ್ರದುರ್ಗ

ತೀವ್ರ ಅತಿಸಾರ ಭೇದಿ ನಿಯಂತ್ರಣಕ್ಕೆ ಓಆರ್‌ಎಸ್ ದ್ರಾವಣ ಮತ್ತು ಜಿಂಕ್ ಮಾತ್ರೆ ಪರಿಣಾಮಕಾರಿಯಾದ ಚಿಕಿತ್ಸೆಯಾಗಿದೆ ಎಂದು ಮಾರುತಿ ನಗರ ಆರೋಗ್ಯ ಕೇಂದ್ರ ವೈದ್ಯಾಧಿಕಾರಿ ಡಾ.ಯಶಸ್ ಹೇಳಿದರು.

ನಗರದ ವಾರ್ಡ್ ಸಂಖ್ಯೆ 20ರ ನಗರ ಆರೋಗ್ಯಕೇಂದ್ರಮಾರುತಿನಗರಆರೋಗ್ಯ ಕೇಂದ್ರದ ಸಭಾಂಗಣದಲ್ಲಿ ನಗರಸಭೆ, ಆರೋಗ್ಯ ಇಲಾಖೆ ಸಹಯೋಗದೊಂದಿಗೆ ಡಯೇರಿಯಾ ತಡೆಗಟ್ಟುವ ಅಭಿಯಾನ, ತೀವ್ರ ಅತಿಸಾರ ಭೇದಿ ನಿಯಂತ್ರಣ ಪಾಕ್ಷಿಕ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅತಿಸಾರ ರೋಗವು 5 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳಲ್ಲಿ ಸಾವಿಗೆ ಮೂರನೇ ಪ್ರಮುಖ ಕಾರಣವಾಗಿದೆ. ಅತಿಸಾರವು ಹಲವಾರು ದಿನಗಳವರೆಗೆ ಇರುತ್ತದೆ ಎಂದು ತಿಳಿಸಿದ ಅವರು ಮಕ್ಕಳ ಆರೋಗ್ಯವೇ ನಮ್ಮ ಆಸ್ತಿಯಾಗಿದ್ದು, ಸ್ವಚ್ಛತೆಗೆ ಹೆಚ್ಚು ಗಮನವಹಿಸಿ ಅತಿಸಾರ



ಭೇದಿಗೆ ತುತ್ತಾಗದಂತೆ ಪೋಷಕರು ಹೆಚ್ಚು ಜಾಗೃತಿ ವಹಿಸಬೇಕು ಎಂದು ಸಲಹೆ ನೀಡಿದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಮಾತನಾಡಿ, ಅತಿಸಾರವು ಸಾಮಾನ್ಯವಾಗಿ ಕರುಳಿನಲ್ಲಿನ ಸೋಂಕಿನ ಲಕ್ಷಣವಾಗಿದೆ. ಇದು ವಿವಿಧ ಬ್ಯಾಕ್ಟೀರಿಯಾ, ವೈರಲ್ ಮತ್ತು ಪರಾವಲಂಬಿ ಜೀವಿಗಳಿಂದ ಉಂಟಾಗಬಹುದು. ಸೋಂಕು ಕಲುಷಿತ ಆಹಾರ ಅಥವಾ ಕುಡಿಯುವ ನೀರಿನ ಮೂಲಕ ಅಥವಾ ಕಳಪೆ ನೈರ್ಮಲ್ಯದ ಪರಿಣಾಮವಾಗಿ ವ್ಯಕ್ತಿಯಿಂದ ವ್ಯಕ್ತಿಗೆ ಹರಡುತ್ತದೆ. ಸುರಕ್ಷಿತ ಕುಡಿಯುವ ನೀರು, ಸುಧಾರಿತ ನೈರ್ಮಲ್ಯದ ಬಳಕೆ ಮತ್ತು ಸಾಬೂನಿನಿಂದ ಕೈ ತೊಳೆಯುವುದು ಸೇರಿದಂತೆ ಅತಿಸಾರ ತಡೆಗಟ್ಟುವ ಮಧ್ಯಸ್ಥಿಕೆಗಳು ರೋಗದ ಅಪಾಯ ಕಡಿಮೆ ಮಾಡಬಹುದು ಎಂದು ಹೇಳಿದರು.

ಕ್ಷೇತ್ರ ಅರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಅವರು ಕೈ ತೊಳೆಯುವ ವಿಧಾನ, ಉಪ್ಪು ಸಕ್ಕರೆ, ಓ.ಆರ್.ಎಸ್. ದ್ರಾವಣ ಸಿದ್ದಪಡಿಸುವ ಪ್ರಾತ್ಯಕ್ಷಿಕೆ ನೀಡಿದರು. ಕಾರ್ಯಕ್ರಮದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಕೆ.ನಂದೀಶ್, ಸುಪ್ರಿತಾ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳಾದ ವಿನ್ನಿ, ಸಿ.ರೂಪ, ಆಶಾ, ಉಷಾ, ಆಶಾ ಕಾರ್ಯಕರ್ತೆಯರಾದ ಪ್ರಿಯ, ಅಮೃತ, ಮಂಜುಳಾ, ನೇತ್ರ, ಸಂಧ್ಯಾ, ಗಣಕ ನಿರ್ವಾಹಕರಾದ ಐಶ್ವರ್ಯ ತಾಯಿ ಮಕ್ಕಳು ಸೇರಿದಂತೆ ಮತ್ತಿತರರು ಇದ್ದರು.

## ಫಾಸ್ಟ್ ನ್ಯೂಸ್

### ಎಕ್ಸ್-ರೇ ಮತ್ತು ಲ್ಯಾಬ್ ಟೆಸ್ಟ್ ಉಚಿತ

» ಚಿತ್ರದುರ್ಗ

ಸ್ವಾತಂತ್ರ್ಯ ದಿನಾಚಾರಣೆ ಅಂಗವಾಗಿ ಆಗಸ್ಟ್ 15 ರಿಂದ ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯಲ್ಲಿ ಲಭ್ಯವಿರುವ ಎಕ್ಸ್–ರೇ ಮತ್ತು ಲ್ಯಾಬ್ ಟೆಸ್ಟ್‌ಗಳನ್ನು ಬಿ.ಪಿ.ಎಲ್ ಫಲಾನುಭವಿಗಳಿಗೆ ಸಂಪೂರ್ಣ ಉಚಿತವಾಗಿ ಮಾಡಲಾಗುತ್ತದೆ. ರೋಗಿಗಳು ಹಾಗೂ ಸಾರ್ವನಿಕರು ಇದರ ಸದುಪಯೋಗ ಪಡಿಸಿಕೊಳ್ಳಬೇಕೆಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ತಿಳಿಸಿದ್ದಾರೆ.

### ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರ ಪ್ರವಾಸ

» ದಾವಣಗೆರೆ

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಡಾ.ತಿಪ್ಪೇಸ್ವಾಮಿ.ಕೆ.ಟಿ ಅವರು ಆಗಸ್ಟ್ 22 ರಂದು ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಆಗಸ್ಟ್ 22 ರಂದು ದಾವಣಗೆರೆ ಜಿಲ್ಲೆಯ ಹರಿಹರ ಮತ್ತು ಜಗಳೂರು ತಾಲ್ಲೂಕಿನ ಆಯ್ದ ಶಾಲೆ, ಪದವಿ ಪೂರ್ವ ಕಾಲೇಜು, ಗ್ರಾಮ ಪಂಚಾಯಿತಿ, ವಿದ್ಯಾರ್ಥಿಗಳ ವಸತಿ ನಿಲಯ, ಅಂಗನವಾಡಿಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸುವರು.

### ಆಗಸ್ಟ್ 15 ರಂದು ಸ್ವಾತಂತ್ರ್ಯ ದಿನಾಚರಣೆ

» ದಾವಣಗೆರೆ

ಜಿಲ್ಲಾಡಳಿತ ವತಿಯಿಂದ ಆಗಸ್ಟ್ 15 ರಂದು ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಲಾಗುತ್ತಿದ್ದು ಜಿಲ್ಲಾ ಕ್ರೀಡಾಂಗಣದಲ್ಲಿ ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜನ್ ಅವರು ಬೆಳಗ್ಗೆ 9 ಗಂಟೆಗೆ ರಾಷ್ಟ್ರಧ್ವಜಾರೋಹಣ ನೆರವೇರಿಸುವರು.

ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ಮಹಾನಗರ ಪಾಲಿಕೆ ಮೇಯರ್ ವಿನಾಯಕ ಬಿ.ಹೆಚ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್ ಭೋಜೇಗೌಡ, ಡಿ.ಎಸ್ ಅರುಣ್, ಚಿದಾನಂದ. ಎಂ.ಗೌಡ, ಕೆ.ಎಸ್ ನವೀನ್, ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಉಪಸ್ಥಿತರಿರುವರು.

ಅಂದು ಸಂಜೆ 6 ಗಂಟೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ಕುವೆಂಪು ಕನ್ನಡ ಭವನದಲ್ಲಿ ಶಾಲಾ ಮತ್ತು ಕಾಲೇಜು ವಿದ್ಯಾರ್ಥಿ–ವಿದ್ಯಾರ್ಥಿನಿಯರಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ.

### ಪಡಿತರ ಚೀಟಿದಾರರು ಇ-ಕೆವೈಸಿ ಮಾಡಿಸಲು ಸೂಚನೆ

» ದಾವಣಗೆರೆ

ಜಿಲ್ಲೆಯಲ್ಲಿನ ಪಡಿತರ ಕಾರ್ಡ್‌ದಾರರ ಇ–ಕೆವೈಸಿ ಕಾರ್ಯ ಮುಂದುವರೆದಿದ್ದು ಇನ್ನೂ ಮಾಡಿಸದೆ ಬಾಕಿ ಇರುವ 45.459 ಪಡಿತರ ಚೀಟಿಗಳ ಫಲಾನುಭಾವಿಗಳು ಇ–ಕೆವೈಸಿ ಮಾಡಿಸಲು ಹತ್ತಿರದ ನ್ಯಾಯ ಬೆಲೆ ಅಂಗಡಿಗೆ ಆಗಸ್ಟ್ 31 ರೊಳಗೆ ಭೇಟಿ ನೀಡಿ ಇ–ಕೆವೈಸಿ ಮಾಡಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕರು ತಿಳಿಸಿದ್ದಾರೆ.

### ಹೊಸದುರ್ಗ: 300 ಅಡಿ ತಿರಂಗದೊಂದಿಗೆ ಜಾಥಾ



» ಹೊಸದುರ್ಗ

ಪಟ್ಟಣದ ಎಸ್.ನಿಜಲಿಂಗಪ್ಪ ಶಿಕ್ಷಣ ಸಂಸ್ಥೆಯ ವತಿಯಿಂದ ಹರ್‌ಘರ್ ತಿರಂಗಾ ಅಭಿಯಾನದ ಅಂಗವಾಗಿ 300 ಅಡಿ ತಿರಂಗಾ ಬಾವುಟದೊಂದಿಗೆ ಬುಧವಾರ ಪಟ್ಟಣದ ಟಿ.ಬಿ.ವೃತ್ತದಿಂದ ಹುಳಿಯಾರು ವೃತ್ತದವರೆಗೂ ಜಾಥಾ ಕಾರ್ಯಕ್ರಮ ನಡೆಯಿತು. ಅಧ್ಯಕ್ಷ ಎಂ.ಶಿವಲಿಂಗಪ್ಪ,ಉಪಾಧ್ಯಕ್ಷ ಕೆ.ಎಸ್.ಪುಟ್ಟರಾಜು,ಕಾರ್ಯದರ್ಶಿ ಕೆ.ಎಸ್. ಕಲ್ಮಠ್,ಖಜಾಂಚಿ ಕೆ.ಸಿ.ಮಲ್ಲಿಕಾರ್ಜುನಪ್ಪ, ಅಕಾಡಮಿ ಡೈರಕ್ಟರ್ ಎಂ.ಬಿ.ತಿಪ್ಪೇಸ್ವಾಮಿ ಸೇರಿದಂತೆ ವಿದ್ಯಾರ್ಥಿಗಳು ಹಾಗೂ ಶಿಕ್ಷಕರಿದ್ದರು.

# ಚಿತ್ರದುರ್ಗ ತಾಲ್ಲೂಕಿನಲ್ಲಿ 53 ಮಿ.ಮೀ ಮಳೆ

» ಚಿತ್ರದುರ್ಗ

ಬುಧವಾರ ಸುರಿದ ಮಳೆ ವಿವರದನ್ವಯ ಚಿತ್ರದುರ್ಗ ತಾಲ್ಲೂಕಿನಲ್ಲಿ 53 ಮಿ.ಮೀ ಮಳೆಯಾಗಿದ್ದು, ಇದು ಜಿಲ್ಲೆಯಲ್ಲಿ ಸುರಿದ ಅಧಿಕ ಮಳೆಯಾಗಿದೆ. ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ 25.6 ಮಿ.ಮೀ, ಹಿರಿಯೂರು ತಾಲ್ಲೂಕು 15.4 ಮಿ.ಮೀ, ಹೊಳಲ್ಕೆರೆ ತಾಲ್ಲೂಕು 45.6 ಮಿ.ಮೀ, ಹೊಸದುರ್ಗ ತಾಲ್ಲೂಕು 21.4 ಮಿ.ಮೀ ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 32.3 ಮಿ.ಮೀ ಮಳೆಯಾಗಿದೆ.

ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 17.5 ಮಿ.ಮೀ, ನಾಯಕನಹಟ್ಟಿ 36 ಮಿ.ಮೀ, ಪರಶುರಾಂಪುರ 15.8 ಮಿ.ಮೀ, ತಳಕು 20.3 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗದಲ್ಲಿ 36.4 ಮಿ.ಮೀ, ಭರಮಸಾಗರ 24.1 ಮಿ.ಮೀ, ಹಿರೇಗುಂಟನೂರು 37.9 ಮಿ.ಮೀ, ತುರುವನೂರು 37.9 ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರಿನಲ್ಲಿ 12 ಮಿ.ಮೀ, ಐಮಂಗಲ 16.2 ಮಿ.ಮೀ.

ಧರ್ಮಪುರ 8.8 ಮಿ.ಮೀ, ಜೆ.ಜೆ.ಹಳ್ಳಿ 4.4 ಮಿ. ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 33.5 ಮಿ.ಮೀ, ಬಿ.ದುರ್ಗ 40.1 ಮಿ.ಮೀ, ರಾಮಗಿರಿ 22.3 ಮಿ.ಮೀ, ತಾಳ್ಯ 27 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 23.1 ಮಿ.ಮೀ, ಮಾಡದಕೆರೆ 19.5 ಮಿ.ಮೀ, ಮತ್ತೋಡು 9.4 ಮಿ.ಮೀ, ಶ್ರೀರಾಂಪುರ 5.7 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನ ಮೊಳಕಾಲ್ಮುರುನಲ್ಲಿ 27.7 ಮಿ.ಮೀ ಹಾಗೂ ದೇಮಸಮುದ್ರದಲ್ಲಿ 33.7 ಮಿ.ಮೀ ಮಳೆಯಾಗಿದೆ.

ಬುಧವಾರ ಸುರಿದ ಮಳೆಗೆ ಚಳ್ಳಕೆರೆ ತಾಲ್ಲೂಕಿನಲ್ಲಿ 4 ಮನೆಗಳು ಭಾಗಶಃ ಹಾನಿಯಾಗಿವೆ. ಹೊಳಲ್ಕೆರೆ ತಾಲ್ಲೂಕಿನಲ್ಲಿ 7 ಮನೆಗಳಿಗೆ ನೀರು ನುಗ್ಗಿದ ಪ್ರಕರಣಗಳು ವರದಿಯಾಗಿದ್ದು, ಚಿತ್ರದುರ್ಗ ತಾಲ್ಲೂಕಿನಲ್ಲಿ 14 ಮನೆಗಳು ಭಾಗಶಃ ಹಾನಿಯಾಗಿವೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ವರದಿ ತಿಳಿಸಿದೆ.



### ಮಳೆಗೆ ಮನೆ ಕುಸಿತ: ಬಾಗೂರಿಗೆ ಅತಿ ಹೆಚ್ಚು ಮಳೆ



ಹೊಸದುರ್ಗ: ಬುಧವಾರ ಮುಂಜಾನೆ ಸುಮಾರು ಸತತವಾಗಿ 60 ನಿಮಿಷಗಳ ಕಾಲ ಸುರಿದ ರಭಸದ ಮಳೆಗೆ ಪಟ್ಟಣದಲ್ಲಿ ಒಂದು ಮನೆ ಸಂಪೂರ್ಣವಾಗಿ ಕುಸಿದು ತಾಲೂಕಿನ ಬಾಗೂರು ಹೋಬಳಿಯಲ್ಲಿ ಅತಿ ಹೆಚ್ಚು ಮಳೆಯಾಗಿದೆ. ಬುಧವಾರ ಮುಂಜಾನೆ ಸುಮಾರು ಮೂರು ಗಂಟೆಯಿಂದ ಪ್ರಾರಂಭವಾದ ರಭಸದ ಮಳೆ ಒಂದು ಗಂಟೆಗಳ ಕಾಲ ಸುರಿಯಿತು.ಪಟ್ಟಣದ ಮಡಿವಾಳ ಜನಾಂಗದ ನಾಗರತ್ನ ಕೋಂ ಮಂಜುನಾಥ ಎಂಬುವವರ ವಾಸದ ಮನೆಯು ಸಂಪೂರ್ಣವಾಗಿ ಕುಸಿದು ಬಿದ್ದಿದ್ದು ಮಳೆ ಬರುವ ಸೂಕ್ಷ್ಮತೆಯನ್ನ ತಿಳಿದು ಬೇರೊಂದು ಮನೆಯಲ್ಲಿ ಮಲಗಿದ್ದ ಕಾರಣ ಯಾರಿಗೂ ಸಹಾ ಪ್ರಾಣಾಪಾಯವಾಗಿರುವುದಿಲ್ಲ ಕಳೆದ ನಾಲ್ಕು ದಿನಗಳಿಂದ ಬಿಡುವು ಕೋಟ್ಟಿದ್ದ ವರುಣ ದೇವ ಬುಧವಾರ ಮುಂಜಾನೆ ಇದ್ದಕ್ಕಿದ್ದಂತೆ ಸುರಿದಿದೆ.

### ತಾಲ್ಲೂಕಿನಾದ್ಯಂತ 198.18 ಎಂ.ಎಂ ಮಳೆ



ಚಳ್ಳಕೆರೆ: ಕಳೆದ ಕೆಲವು ದಿನಗಳಿಂದ ಬಿಡುವುಕೊಟ್ಟಿದ್ದ ಮಳೆರಾಯ ರೈತರಲ್ಲಿ ಆತಂಕ ಹುಟ್ಟಿಸಿದ್ದ. ತಾಲ್ಲೂಕಿನಾದ್ಯಂತ ಪ್ರಮುಖ ಬೆಳೆಯಾದ ಶೇಂಗಾ ಅಲ್ಪಪ್ರಮಾಣದಲ್ಲಿ ಬಿತ್ತನೆಯಾಗಿದ್ದು, ಮಳೆಬಾರದೆ ಶೇಂಗಾ ಬಿತ್ತನೆ ಮಾಡಿದ್ದ ರೈತರು ಚಿಂತನೆಗೆ ಒಳಗಾಗಿದ್ದರು. ಆದರೆ, ಆ.14ರ ಬೆಳಗಿನ ಜಾವ ವರುಣ ಕೃಪೆತೋರಿದ್ದು ನಿರೀಕ್ಷೆಗೂ ಮೀರಿ ಉತ್ತಮ ಮಳೆಯಾಗಿದೆ. ಮಳೆಯಿಂದ ಯಾವುದೇ ಜೀವಹಾನಿ ಇಲ್ಲವಾದರೂ ಒಂದೆರಡು ಕಡೆ ಹಳೆ ಮಾಳಿಗೆ ಮನೆ ಕುಸಿದು ಬಿದ್ದು ನಷ್ಟ ಸಂಭವಿಸಿದೆ. ಒಂದೇ ಹಂತದಲ್ಲಿ 198.18 ಎಂ.ಎಂ ಮಳೆಯಾಗಿದ್ದು, ರೈತರು ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ.

ತಾಲ್ಲೂಕಿನಾದ್ಯಂತ ಬುಧವಾರ ಬೆಳಗಿನ ಜಾವ ಬಿದ್ದ ಮಳೆ ಪ್ರಮಾಣ ನಾಯಕನಹಟ್ಟಿ–59.06, ಚಳ್ಳಕೆರೆ–54.00, ಪರಶುರಾಮಪುರ–46.06, ತಳಕು–22.04, ದೇವರಮರಿಕುಂಟೆ–17.02 ಎಂ.ಎಂ. ಮಳೆಯಾಗಿದ್ದು ಒಟ್ಟು 198.18 ಮಳೆಯಾಗಿದೆ. ತಳಕು ಹೋಬಳಿಯ ದಾಸರ್ಲಹಳ್ಳಿ ಗ್ರಾಮದ ಎಸ್.ಟಿ.ಶಂಕರಪ್ಪ ಎಂಬುವವರ ಮನೆಯ ಗೋಡೆ ಕುಸಿದು ಬಿದ್ದು 50 ಸಾವಿರ ನಷ್ಟ ಸಂಭವಿಸಿದೆ. ಕಸಬಾ ಹೋಬಳಿಯ ಹೊಸಮುಚ್ಚುಗುಂಟೆ ಗ್ರಾಮದ ಸುಶೀಲಮ್ಮ ಎಂಬುವವರ ಮನೆ ಮೇಲ್ಚಾವಣೆ ಕುಸಿದು 30 ಸಾವಿರ ನಷ್ಟ ಸಂಭವಿಸಿದೆ.

## ಹೆಲ್ಮೆಟ್ ಜಾಗೃತಿ ಜಾಥಾಕ್ಕೆ ಡಿಸಿ ವೆಂಕಟೇಶ್ ಚಾಲನೆ

» ಚಿತ್ರದುರ್ಗ

ಭಾರತ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಪೊಲೀಸ್ ಇಲಾಖೆ ವತಿಯಿಂದ ಹೆಲ್ಮೆಟ್ ಜಾಗೃತಿ ಹಾಗೂ ಹರ್ ಘರ್ ತಿರಂಗಾ ಅಭಿಯಾನಕ್ಕೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ನಗರದ ಹೊಳಲ್ಕೆರೆ ರಸ್ತೆಯ ಕನಕವೃತ್ತದಿಂದ ಆರಂಭವಾದ ಹೆಲ್ಮೆಟ್ ಜಾಗೃತಿ ಜಾಥಾವು ಸಂಗೊಳ್ಳಿ ರಾಯಣ್ಣ ವೃತ್ತ, ಗಾಂಧಿ ವೃತ್ತ, ಎಸ್‌ಬಿಎಂ ವೃತ್ತ ಹಾಗೂ ಪ್ರವಾಸಿ ಮಂದಿರ ಮಾರ್ಗವಾಗಿ ಒನಕೆ ಓಬವ್ವ ವೃತ್ತದವರೆಗೂ ನಡೆಯಿತು.

ಪೊಲೀಸ್ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿಯವರು ಶಿಸ್ತುಬದ್ಧವಾಗಿ ಬೈಕ್‌ನಲ್ಲಿ ಹೆಲ್ಮೆಟ್ ಧರಿಸಿ, ಜನರಲ್ಲಿ ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಡಿವೈಎಸ್‌ಪಿ ದಿನಕರ್ ಸೇರಿದಂತೆ ಪೊಲೀಸ್ ಇಲಾಖೆ ವಿವಿಧ ಅಧಿಕಾರಿಗಳು ಹಾಗೂ ಸಿಬ್ಬಂದಿ ಇದ್ದರು.



### ಬಾಲಕಾರ್ಮಿಕ ಅರಿವು ಅಭಿಯಾನ



» ಚಿತ್ರದುರ್ಗ

ಪಾನ್ ಇಂಡಿಯಾ ರೆಸ್ಕ್ಯೂ ಆಂಡ್ ರಿಹಾಬಿಲಿಟೇಷನ್ ಕ್ಯಾಂಪೇನ್ ಅಂಗವಾಗಿ ಬುಧವಾರ ಚಿತ್ರದುರ್ಗ ನಗರದ ವಿವಿಧ ವಾಣಿಜ್ಯ ಸಂಸ್ಥೆ, ಗ್ಯಾರೇಜ್ ಹಾಗೂ ಡಾಬಾ ಅಂಡ್ ರೆಸ್ಟೋರೆಂಟ್‌ಗಳಿಗೆ ಕಾರ್ಮಿಕ ಇಲಾಖೆ ಅಧಿಕಾರಿ ನೇತೃತ್ವದ ತಂಡ ಭೇಟಿ ನೀಡಿ ತಪಾಸಣೆ ನಡೆಸಿತು. ಈ ಸಂದರ್ಭದಲ್ಲಿ ಬಾಲ್ಯ ಹಾಗೂ ಕಿಶೋರಾವಸ್ಥೆ ಕಾರ್ಮಿಕ ನಿಷೇಧ ಕುರಿತು ಮಾಲೀಕರಿಗೆ ತಿಳಿ ಹೇಳಿ, ಬಾಲಕಾರ್ಮಿಕರನ್ನು ನೇಮಿಸಿಕೊಳ್ಳಬಾರದೆಂದು ಅರಿವು ಮೂಡಿಸಲಾಯಿತು. ತಂಡದಲ್ಲಿ ಕಾರ್ಮಿಕ ನಿರೀಕ್ಷಕ ಭೀಮೇಶ್, ಬಾಲ ಕಾರ್ಮಿಕ ಯೋಜನಾ ಸೊಸೈಟಿ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್, ಶಿಶು ಅಭಿವೃದ್ಧಿ ಯೋಜನಾಧಿಕಾರಿ ವೀಣಾ, ಶಿಕ್ಷಣ ಇಲಾಖೆ ಬಿ.ಆರ್.ಪಿ ಮೈಲಾರಪ್ಪ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಂಜುನಾಥ ಜೈನ್, ಪೊಲೀಸ್ ಇಲಾಖೆ ಶಿವಕುಮಾರ್, ಮಕ್ಕಳ ಸಹಾಯವಾಣಿ ಸಿಬ್ಬಂದಿ ರುದ್ರೇಶ್ ಇದ್ದರು.

## ಆ. 20 ರಿಂದ ರಾಘವೇಂದ್ರ ಸ್ವಾಮಿ ಆರಾಧನಾ ಮಹೋತ್ಸವ

ಹೊಸದುರ್ಗ: ಪಟ್ಟಣದ ಹುಳಿಯಾರು ವೃತ್ತದಲ್ಲಿರುವ ಆಂಜನೇಯ ಸ್ವಾಮಿ ಪೂಜಾ ಮಹೋತ್ಸವ ಹಾಗೂ ರಾಘವೇಂದ್ರ ಸ್ವಾಮಿಗಳ ಆರಾಧನಾ ಮಹೋತ್ಸವ ಆ.20 ರಿಂದ 22 ರವರೆಗೆ ನಡೆಯಲಿದೆ ಎಂದು ಆಂಜನೇಯ ಸ್ವಾಮಿ ದೇವಸ್ಥಾನ ಮತ್ತು ರಾಘವೇಂದ್ರ ಸ್ವಾಮಿಗಳ ಮೂಲ ಮೃತ್ತಿಕೆ ಬೃಂದಾವನ ಸೇವಾ ಸಮಿತಿ ಅಧ್ಯಕ್ಷ ಮಂಜುನಾಥ್ ದಿವಾಕರ್ ತಿಳಿಸಿದರು. ಪಟ್ಟಣದ ಹುಳಿಯಾರು ವೃತ್ತದಲ್ಲಿನ ಆಂಜನೇಯ ಸ್ವಾಮಿ ದೇವಾಲಯದಲ್ಲಿ ಆಯೋಜಿಸಿದ್ದ 'ಆರಾಧನಾ ಮಹೋತ್ಸವ ಪೂರ್ವಸಿದ್ಧತಾ ಸಭೆಯಲ್ಲಿ ' ಭಾಗವಹಿಸಿ ಮಾತನಾಡಿದರು.2004 ರಂದು ದೇವಾಸ್ಥಾನ ಜೀರ್ಣೋದ್ಧಾರ ಆಗಿದ್ದು, ಅಂದಿನಿಂದಲೂ ಆರಾಧನಾ ಮಹೋತ್ಸವ ವೈಭವಯುತವಾಗಿ ನಡೆಯುತ್ತಿದೆ. ಅದೇ ರೀತಿ ಈ ಬಾರಿಯೂ ಕೂಡ ಮೂರು ದಿನ ಆರಾಧನಾ ಮಹೋತ್ಸವ ನಡೆಸಲಾಗುವುದು. ಆ. 20 ರಂದು ಬೆಳಿಗ್ಗೆ ಪಂಚಾಮೃತ ಅಭಿಷೇಕ, ಅಷ್ಟೋತ್ತರ ಮತ್ತು ಮಹಾಮಂಗಳಾರತಿ, ರಾತ್ರಿ 8 ಕ್ಕೆ ಪ್ರಾಕಾರೋತ್ಸವ, ಅಷ್ಟಾವಧಾನ ನಡೆಯಲಿದೆ. ಆ.21 ಮಧ್ಯಾರಾಧನೆ, ಆ. 22 ಉತ್ತರಾರಾಧನೆ ಅಂಗವಾಗಿ ಅಭಿಷೇಕ ಮಹಾಮಂಗಳಾರತಿ ನಡೆಯಲಿದೆ,



ಪ್ರಮುಖ ಸುದ್ದಿ


# ಆ.20ರಿಂದ 22ರವರೆಗೆ ಆರಾಧನಾ ಪಂಚರಾತ್ರೋತ್ಸವ

» ಚಿತ್ರದುರ್ಗ

ಶ್ರೀ ಗುರುಸಾರ್ವಭೌಮರು ಮಂತ್ರಾಲಯ ಮಹಾಕ್ಷೇತ್ರದಲ್ಲಿ ಸಶರೀರರಾಗಿ ಬೃಂದಾವನ ಪ್ರವೇಶ ಮಾಡಿದ ಸ್ಮರಣಾರ್ಥವಾಗಿ ಆಚರಿಸುವ 353ನೇ ಆರಾಧನಾ ಪಂಚರಾತ್ರೋತ್ಸವ ಆ. 20ರಿಂದ 22 ರವರೆಗೆ ಈ ಮೂರು ದಿನಗಳಲ್ಲಿ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ನಗರದ ಶ್ರೀ ರಾಘವೇಂದ್ರ ಸ್ವಾಮಿಗಳವರ ಮಠದಲ್ಲಿ ನಡೆಸಲು ಸಂಕಲ್ಪಿಸಲಾಗಿದೆ

ಮಂತ್ರಾಲಯದ ಮಹಾಪ್ರಭುಗಳು, ಮಾನವ ಕಲ್ಯಾಣಕ್ಕಾಗಿ ಅವತರಿಸಿ ಜಾತಿ, ಮತ, ಪಂಥಗಳ ಭೇದವಿಲ್ಲದೆ ಆರ್ತರನ್ನು ರಕ್ಷಿಸುತ್ತಿರುವುದು ಮನೆಮಾತಾಗಿದೆ. ಇಂಥ ಮಹಾನುಭಾವರು ಐತಿಹಾಸಿಕ ಪೌರಾಣಿಕ ಪ್ರಸಿದ್ಧವಾದ ಚಿತ್ರದುರ್ಗ ನಗರಕ್ಕೆ ಆಗಮಿಸಿದಾಗ ನೀರಿನ ವೆಂಕಣ್ಣನಿಗೆ ಮೋಕ್ಷವನ್ನು ಕೊಟ್ಟುದರ ಸ್ಮಾರಕವು ಇಂದಿಗೂ ಶ್ರೀಮಠದಲ್ಲಿ ಸಾಕ್ಷಿಯಾಗಿ ನಿಂತಿದೆ. ಪಾಂಡವರು ಪೂಜಿಸಿದ ಪ್ರಾಣದೇವರು ಹಾಗೂ ಶ್ರೀ ರಾಘವೇಂದ್ರ ಸ್ವಾಮಿಗಳು ತಮ್ಮ ಬೃಂದಾವನವು ಹೀಗಿರಬೇಕೆಂದು ಸ್ವ–ಹಸ್ತದಿಂದ ನಿರ್ಮಿಸಿ ತೋರಿಸಿದ ಮಾದರಿ ಬೃಂದಾವನದಿಂದಲೂ, ಮೊದಲು ಶ್ರೀ ಸುಮತೀಂದ್ರತೀರ್ಥರು ಪೂಜಿಸಿ, ನಂತರ 1962 ರಲ್ಲಿ ಶ್ರೀ ಸುಯಮೀಂದ್ರತೀರ್ಥರಿಂದ ಸ್ಥಿರ ಬೃಂದಾವನ ಪ್ರತಿಷ್ಠಾಪನೆಗೊಂಡು ಹಾಗೂ 1985ರಲ್ಲಿ ಶ್ರೀ ಸುಜಯೀಂದ್ರತೀರ್ಥರು ಹಾಗೂ ಶ್ರೀ ಸುಶಮೀಂದ್ರತೀರ್ಥರಿಂದ ಪುನ: ಪ್ರತಿಷ್ಠಾಪನೆಗೊಂಡು ಶ್ರೀ ರಾಘವೇಂದ್ರ ಗುರುಸಾರ್ವಭೌಮರ ವಿಶೇಷ ಸನ್ನಿಧಾನವು ಶೋಭಿಸುತ್ತಿದೆ. ಹೀಗೆ ಭಕ್ತರು ಬೇಡಿದ ಇಷ್ಟಾರ್ಥಗಳನ್ನು ಈಡೇರಿಸುವುದರಲ್ಲಿ ಪ್ರತ್ಯಕ್ಷ ಸಾಕ್ಷಿಯಾಗಿ ಶ್ರೀ ಗುರುಸಾರ್ವಭೌಮರು ಮಂತ್ರಾಲಯ ಮಹಾಕ್ಷೇತ್ರದಲ್ಲಿ ಸಶರೀರರಾಗಿ ಬೃಂದಾವನ ಪ್ರವೇಶ ಮಾಡಿದ ಸ್ಮರಣಾರ್ಥವಾಗಿ ಆಚರಿಸುವ 353ನೇ ಆರಾಧನಾ ಪಂಚರಾತ್ರೋತ್ಸವವಾಗಿದೆ.

353ನೇ ಆರಾಧನಾ ಮಹೋತ್ಸವದ ಕಾರ್ಯಕ್ರಮಗಳಲ್ಲಿ ಆ.19 ನೇ ಸೋಮವಾರ ಬೆಳಗ್ಗೆ 7.30 ರಿಂದ ಋಗ್ವದ, ಯಜುರ್ವೇದ, ನಿತ್ಯ, ನೂತನ ಉಪಾಕರ್ಮ ಸಂಜೆ 6.30ರಿಂದ ಪಂಚರಾತ್ರೋತ್ಸವದ ಅಂಗವಾಗಿ ಧ್ವಜಾರೋಹಣ, ಗೋಪೂಜೆ, ಧನ–ಧಾನ್ಯ ಪೂಜೆ, ಲಕ್ಷ್ಮೀ ಪೂಜೆ, ಸ್ವಸ್ತಿ ವಾಚನ, ಮಹಾಮಂಗಳಾರತಿ. ಈ ಸಂದರ್ಭದಲ್ಲಿ ಬ್ರಾಹ್ಮಣ ಸಂಘ(ರಿ)ದ ಅಧ್ಯಕ್ಷರಾದ ಪಿ.ಎಸ್ ಮಂಜುನಾಥ್, ಕಾರ್ಯದರ್ಶಿ ದೀಪಾನಂದ ಉಪಾಧ್ಯ ಮತ್ತು ಸಹೋದರರು ಶ್ರೀ ಗುರುರಾಜ ಸೇವಾ ಸಂಘದ ಅಧ್ಯಕ್ಷರಾದ ವೇದವ್ಯಾಸಾಚಾರ್, ಶ್ರೀ ಹರಿವಾಯು ಗುರು ಸೇವಾ ಟ್ರಸ್ಟ್‌ನ ಅಧ್ಯಕ್ಷರಾದ ಟಿ.ಕೆ. ನಾಗರಾಜ್ ರಾವ್ ಭಾಗವಹಿಸಲಿದ್ದಾರೆ.




ಆ. 20ರ ಮಂಗಳವಾರ : ಶ್ರೀ ಗುರುಸಾರ್ವಭೌಮರ ಪೂರ್ವಾರಾಧನೆ ಆ. 21ನೇ ಬುಧವಾರ : ಶ್ರೀ ಗುರುಸಾರ್ವಭೌಮರ ಮಧ್ಯಾರಾಧನೆ ಆ. 22ನೇಗುರುವಾರ:ಶ್ರೀಗುರುಸಾರ್ವಭೌಮರ ಉತ್ತರಾರಾಧನೆ ಪ್ರಾತ: 10.00 ಗಂಟೆಗೆ ಶ್ರೀ ಗುರುಸಾರ್ವಭೌಮರ ಉತ್ತರಾರಾಧನೆ ಪ್ರಯುಕ್ತ ಮಹಾರಥೋತ್ಸವವು ಚಿತ್ರದುರ್ಗದ ರಾಜಬೀದಿಗಳಲ್ಲಿ ವಿವಿಧ ಭಜನಾಮಂಡಳಿಗಳು ಹಾಗೂ ಶ್ರೀ ಗುರುಸಾರ್ವಭೌಮರ ಭಕ್ತರೊಂದಿಗೆ ಜರುಗುವುದು. ಆ 23 ನೇ ಶುಕ್ರವಾರ : ಶ್ರೀ ಸುಜ್ಞಾನೇಂದ್ರತೀರ್ಥರ ಆರಾಧನೆ, ಪವಮಾನ ಹೋಮ, ಸರ್ವಸಮರ್ಪಣೋತ್ಸವ ಕಾರ್ಯಕ್ರಮ ನಡೆಯಲಿದೆ.

ಆರಾಧನಾ ದಿನತ್ರಯಗಳಲ್ಲಿ ಬೆಳಿಗ್ಗೆ 05.30ಕ್ಕೆ ಬೆಳಿಗ್ಗೆ 07.30ಕ್ಕೆ : ನಿರ್ಮಾಲ್ಯ ಅಷ್ಟೋತ್ತರ ಸಹಿತ ಫಲಪಂಚಾಮೃತ ಅಭಿಷೇಕ ಬೆಳಿಗ್ಗೆ 09.30ಕ್ಕೆ: ಉತ್ಸವರಾಯರ ಪಾದಪೂಜೆ, ಕನಕಾಭಿಷೇಕ ಬೆಳಿಗ್ಗೆ 12.00ಕ್ಕೆ : ನೈವೇದ್ಯ, ಅಲಂಕಾರ ಪಂಕ್ತಿ, ಹಸ್ತೋದಕ, ಮಹಾಮಂಗಳಾರತಿ, ತೀರ್ಥಪ್ರಸಾದ ಬೆಳಿಗ್ಗೆ 11.00 ರಿಂದ : ಭಜನಾ ಕಾರ್ಯಕ್ರಮ ಸಂಜೆ 05.30 ರಿಂದ 07.30ವರೆಗೆ : ಸಾಂಸ್ಕೃತಿಕ ಕಾರ್ಯಕ್ರಮ ಸಂಜೆ 07.30 ರಿಂದ 09.00ವರೆಗೆ : ರಜತ ರಥೋತ್ಸವ, ಸ್ವಸ್ತಿವಾಚನ, ಅಷ್ಟಾವಧಾನ, ಮಹಾಮಂಗಳಾರತಿ. ಮಹಾ ಅನ್ನಸಂತರ್ಪಣೆ (ರಾಯರ ಮಹಾಪ್ರಸಾದ) ವಿತರಿಸಲಾಗುವುದು.

ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಆ. 20 ರಂದು ಬೆಳಿಗ್ಗೆ 11.00 ರಿಂದ ಭಜನೆ – ಶ್ರೀ ಪಾಂಡುರಂಗ ಭಜನಾ ಮಂಡಳಿ ಸಂಜೆ 5.30 ರಿಂದ 7.30 ರವರೆಗೆ ಭರತನಾಟ್ಯ ಕಾರ್ಯಕ್ರಮ ನಾಟ್ಯಶ್ರೀ ಭರತನಾಟ್ಯ ಶಾಲೆ, ಬೆಂಗಳೂರು ಇವರಿಂದ ಆ. 21 ನೇ ಬುಧವಾರ ಬೆಳಿಗ್ಗೆ 11.00 ರಿಂದ ಭಜನೆ – ಶ್ರೀ ಸಪ್ತಗಿರಿ ಭಜನಾ ಮಂಡಳಿಯವರಿಂದ ಸಾಯಂಕಾಲ 5.30 ರಿಂದ 7.30 ರವರೆಗೆ ದಾಸವಾಣಿ ಕಾರ್ಯಕ್ರಮ (ಹಿಂದುಸ್ತಾನಿ) ಶ್ರೀ ಸುಜೀತ್ ಕುಲಕರ್ಣಿ ಇವರಿಂದ ಆ. 22 ನೇ ಗುರುವಾರ ಸಾಯಂಕಾಲ 5.30 ರಿಂದ ಶ್ರೀ ರಾಘವೇಂದ್ರ ಸ್ವಾಮಿಗಳವರ ಸ್ಮರಣೆ ರೂಪಕ, ಚಿತ್ರದುರ್ಗದ ಶ್ರೀ ಗುರುರಾಜರ ಭಕ್ತರಿಂದ ಆ 23 ನೇ ಶುಕ್ರವಾರ ಬೆಳಿಗ್ಗೆ 11.00 ರಿಂದ ಭಜನೆ ಶ್ರೀ ಬ್ರಹ್ಮಚೈತನ್ಯ ಮಹಿಳಾ ಭಜನಾ ಮಂಡಳಿಯವರಿಂದ ಸಂಜೆ 5.30 ರಿಂದ 7.30ರವರೆಗೆ ಚಂಪಕ ಶ್ರೀಧರ್ ಮತ್ತು ಶಿಷ್ಯವೃಂದದವರಿಂದ ಕರ್ನಾಟಿಕ್ ಸಂಗೀತ ಕಾರ್ಯಕ್ರಮ ನಡೆಯಲಿದೆ. ಶ್ರೀ ಗುರುರಾಜರ ಆರಾಧನಾ ವೈಭವವನ್ನು ಕಂಡು ಭಕ್ತರು ಕಣ್ಮನ ತುಂಬಿಕೊಳ್ಳಬಹುದಾಗಿದೆ. ಕಾರಣ ಆಸ್ತಿಕ ಸಜ್ಜನರು ಈ ಮೂರು ದಿವಸಗಳ ಕಾಲ ಶ್ರೀಮಠಕ್ಕೆ ಆಗಮಿಸಿ ಶ್ರೀ ಗುರುರಾಜರ ದರ್ಶನ, ಸೇವಾ ಸೌಭಾಗ್ಯ ಪಡೆದು ಆರಾಧನಾ ಮಹೋತ್ಸವದಲ್ಲಿ ಭಾಗವಹಿಸುವಂತೆ ಮನವಿ ಮಾಡಲಾಗಿದೆ.

ಫಾಸ್ಟ್ ನ್ಯೂಸ್

## ಅಸ್ಪೃಶ್ಯತೆ ಬಡತನ ನಿವಾರಿಸುವಂತೆ ಧರಣಿ



» ಚಿತ್ರದುರ್ಗ

ದೇಶಕ್ಕೆ ಸ್ವಾತಂತ್ರ್ಯ ಬಂದು 78 ವರ್ಷಗಳಾಗಿದ್ದರೂ ಅಸ್ಪೃಶ್ಯತೆ ಬಡತನ ಇನ್ನು ನಿವಾರಣೆಯಾಗಿಲ್ಲ. ಸಾಕಷ್ಟು ಬಡ ಕುಟುಂಬಗಳು ಇನ್ನು ಬಿ.ಪಿ.ಎಲ್.ಪಟ್ಟಿಯಲ್ಲಿಯೇ ಇವೆ.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಬಡತನ ನಿವಾರಣೆಯತ್ತ ಗಮನ ಹರಿಸುವಂತೆ ಕರ್ನಾಟಕ ಕೊಳಗೇರಿ ನಿವಾಸಿಗಳ ಸಂಯುಕ್ತ ಸಂಘಟನೆ ಜಿಲ್ಲಾ ಸಮಿತಿ ಅಧ್ಯಕ್ಷ ಗಣೇಶ್ ಒತ್ತಾಯಿಸಿದರು.

ಸ್ವಾತಂತ್ರ್ಯ ದಿನಾಚರಣೆಯ ಮುನ್ನಾ ದಿನವಾದ ಬುಧವಾರ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಮುಂಭಾಗ ಏಕಾಂಗಿ ಧರಣಿ ನಡೆಸಿದ ಅವರು ಸ್ವಂತ ಮನೆ ಜಮೀನು ಇಲ್ಲದವರು ನೆಮ್ಮದಿಯಿಂದ ಬದುಕಬೇಕಾಗಿರುವುದರಿಂದ ಆಳುವ ಸರ್ಕಾರಗಳು ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಬೇಕೆಂದು ಜಿಲ್ಲಾಡಳಿತದ ಮೂಲಕ ರಾಜ್ಯದ ಮುಖ್ಯಮಂತ್ರಿ ಹಾಗೂ ಪ್ರಧಾನಿಗೆ ಮನವಿ ಸಲ್ಲಿಸಿದರು.

## ಹಿರಿಯ ನಾಗರೀಕರಿಗೆ ಆಯುರ್ವೇದ ಚಿಕಿತ್ಸೆ ಪರಿಣಾಮಕಾರಿ




» ಹೊಸದುರ್ಗ

ಆಯುಷ್ ಚಿಕಿತ್ಸೆ ಎಂಬುದು ಎಲ್ಲರಿಗೂ ಸಹಾ ಅತ್ಯಗತ್ಯವಾದ ಚಿಕಿತ್ಸೆ ಅದರಲ್ಲೂ ಹಿರಿಯ ನಾಗರೀಕರಲ್ಲಿ ಕಂಡು ಬರುವ ವಯೋ ಸಹಜ ಕಾಯಿಲೆಗಳಿಗೆ ಆಯುರ್ವೇದ ಚಿಕಿತ್ಸೆ ಪರಿಣಾಮಕರಿಯಾಗಿದ್ದು ಇಂತಹ ಚಿಕಿತ್ಸೆಯನ್ನು ಪಡೆದುಕೊಳ್ಳುವಂತೆ ವೈದ್ಯಾಧಿಕಾರಿ ಡಾ:ನದಾಫ್ ತಿಳಿಸಿದರು.ಹಿರಿಯ ನಾಗರೀಕ ದಿನದ ಅಂಗವಾಗಿ ಪಟ್ಟಣದ ಕೋಟೆ ಬಡಾವಣೆಯಲ್ಲಿರುವ ವೃದ್ದಾಶ್ರಮದಲ್ಲಿ ಮಂಗಳವಾರ ಆಯೋಜಿಲಾಗಿದ್ದ ಉಚಿತ ಆರೋಗ್ಯ ತಪಾಸಣೆ ಮತ್ತು ಆಯುರ್ವೇದ ಔಷಧ ವಿತರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮತನಾಡಿದರು.ಆಯುಷ್ ಚಿಕಿತ್ಸೆ ಎಂಬುದು ಒಂದು ಉತ್ತಮ ಚಿಕಿತ್ಸೆ ಈ ಚಿಕಿತ್ಸೆಯಲ್ಲಿ ಯಾವುದೇ ಅಡ್ಡ ಪರಿಣಾಮ ಆಗುವುದಿಲ್ಲ ಚಿಕ್ಕಮಕ್ಕಳಿಂದ ಹಿಡಿದು ವಯೋ ವೃದ್ದರವರೆಗೂ ಸಹಾ ಆಯುಷ್ ಚಿಕಿತ್ಸೆಯನ್ನ ಪಡೆಯಬಹುದು ಎಂದು ಕರೆ ನೀಡಿದರು.ಸರ್ಕಾರಿ ಆಯುರ್ವೇದ ಘಟಕ ಹೊಸದುರ್ಗದ ಡಾಕ್ಟರ್ ಪವನ್ ಕುಮಾರ್ ಸಫಾರೆ ಮಾತನಾಡಿ ವೈದ್ಯರು ವೃದ್ಧರಲ್ಲಿ ಬರುವಂತಹ ಸಂಧಿವಾತ, ಮಲಬದ್ಧತೆ, ಅನಿದ್ರೆ, ಮಧುಮೇಹ, ಅಧಿಕ ರಕ್ತದೂತದ ಇತ್ಯಾದಿ ಕಾಯಿಲೆಗಳಿಗೆ ಲಘುವಾದ ಆಹಾರ, ನಿಯಮಿತವಾದ ವ್ಯಾಯಾಮ ಪ್ರಾಣಾಯಾಮ ಮತ್ತು ಆಯುರ್ವೇದ ಚಿಕಿತ್ಸೆಯನ್ನು ತೆಗೆದುಕೊಳ್ಳುವುದರಿಂದ ಉತ್ತಮ ಆರೋಗ್ಯವನ್ನು ಪಡೆಯಬಹುದು ಎಂದು ತಿಳಿಸಿದರು.ಅಧ್ಯಕ್ಷತೆ ವಹಿಸಿದ್ದ ಡಾ: ನಾಗರಾಜ್ ಮಾತನಾಡಿ ವಯೋ ಸಹಜವಾಗಿ ಬರುವ ಚಿಂತೆ ಮಾನಸಿಕ ಒತ್ತಡವನ್ನು ಭಯ ಅಸೂಯೋ ಬೇಸರದಂತೆ ಮನಸ್ಥಿತಿಯಲ್ಲಿ ಪಡೆಯಲು ಪ್ರಾಣಾಯಾಮ ಮತ್ತು ಪರಸ್ಪರ ಆತ್ಮೀಯ ಭಾವ ಇರುವುದು ಮುಖ್ಯ ಎಂದು ತಿಳಿಸಿದರು ಕಾರ್ಯಕ್ರಮದಲ್ಲಿ ವಿಶ್ರಾಂತಿ ವೃದ್ಧಾಶ್ರಮದ ರುದ್ರೇಶ್, ಗುರುಬಸವರಾಜ. ಶ್ರೀನಿವಾಸ್. ವಿಜಯಕುಮಾರಿ. ಭರತ್. ಕವಿತಾ. ಅರುಣ್‌ಕುಮಾರಿ. ಮರಳುಸಿದ್ದೇಶ್. ಕಿರಣ್. ಶಿಲ್ಪ ಇವರು ಕಾರ್ಯಕ್ರಮಕ್ಕೆ ಭಾಗವಹಿಸಿದ್ದರು. ಕರ್ನಾಟಕ ಸರ್ಕಾರ ಆಯುಷ್ ಇಲಾಖೆ ಚಿತ್ರದುರ್ಗ, ಸರ್ಕಾರಿ ಆಯುರ್ವೇದ ಚಿಕಿತ್ಸಾಲಯ ಮತ್ತು ಕ್ಷೇಮ ಕೇಂದ್ರ ಕಂಗುವಳ್ಳಿ ಹಾಗೂ ಸರ್ಕಾರಿ ಆಯುರ್ವೇದ ಘಟಕ ಹೊಸದುರ್ಗ ಇವರ ಸಹಯೋಗದಲ್ಲಿ ಕಾರ್ಯಕ್ರಮವನ್ನ ಆಯೋಜಿಸಲಾಗಿತ್ತು.

## ವಿದ್ಯುತ್ ವ್ಯತ್ಯಯ

» ದಾವಣಗೆರೆ

ಜಲಸಿರಿ ಯೋಜನೆ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಆಗಸ್ಟ್ 16 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಎಫ್–14 ವಿದ್ಯಾನಗರ ಫೀಡರ್, ಶಿವಕುಮಾರಸ್ವಾಮಿ ಬಡಾವಣೆ 1 ಮತ್ತು 2ನೇ ಹಂತ, ಹದಡಿ ರಸ್ತೆ , ಐಟಿಐ ಕಾಲೇಜ್ , ಸೆಂಟ್‌ಜಾನ್ಸ್ ಸ್ಕೂಲ್ 60 ಅಡಿ ಪಿಬಿ ರೊಡ್ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

# ಹೊಸದುರ್ಗದಲ್ಲಿ 10 ಹೊಸ ಅಂಗನವಾಡಿ ಕೇಂದ್ರ ನಿರ್ಮಾಣಕ್ಕೆ ನಿವೇಶನ ಹಸ್ತಾಂತರ ಮಾಡಿದ ಶಾಸಕ

» ಹೊಸದುರ್ಗ

ಪುರಸಭೆಯ ವ್ಯಾಪ್ತಿಯಲ್ಲಿ 23 ವಾರ್ಡುಗಳಿದ್ದು ಅಂಗನವಾಡಿ ಕೇಂದ್ರಗಳನ್ನು ಸುಮಾರು ವರ್ಷಗಳಿಂದ ಬಾಡಿಗೆ ಕಟ್ಟಡಗಳಲ್ಲಿ ನಡೆಸುತ್ತಾ ಬಂದಿದ್ದು ಪಟ್ಟಣದ ಪ್ರಮುಖ ಸ್ಥಳಗಳಲ್ಲಿ ನಿವೇಶನಗಳನ್ನು ಮಂಜೂರು ಮಾಡಲು ಹಲವು ವರ್ಷಗಳಿಂದ ಸಿಡಿಪಿಓ ಇಲಾಖೆ ಮನವಿ ಮಾಡಿದ್ದರ ಮೇರೆಗೆ ಇದೀಗ ಪಟ್ಟಣದ ಹಲವು ವಾರ್ಡುಗಳಲ್ಲಿ 10 ಹೊಸ ಅಂಗನವಾಡಿ ಕೇಂದ್ರ ನಿರ್ಮಾಣಕ್ಕೆ ನಿವೇಶನಗಳನ್ನು ಇ–ಸ್ವತ್ತು ಸಹಿತ ಹಸ್ತಾಂತರ ಮಾಡಲಾಗಿದೆ ಎಂದು ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಅಧ್ಯಕ್ಷ ಹಾಗೂ ಶಾಸಕ ಬಿ.ಜಿ.ಗೋವಿಂದಪ್ಪ ತಿಳಿಸಿದರು.ಪಟ್ಟಣದ ಶಾಸಕರ ಭವನದಲ್ಲಿ ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ ಇವರ ಸಮ್ಮುಖದಲ್ಲಿ ಸಿಡಿಪಿಓ ಕುಮಾರಿ ಅಭಿಲಾಷ ಅವರಿಗೆ 10 ಹೊಸ ಅಂಗನವಾಡಿ ಕೇಂದ್ರ ನಿರ್ಮಾಣಕ್ಕೆ ನಿವೇಶನಗಳನ್ನು ಇ–ಸ್ವತ್ತು ಸಹಿತ ಹಸ್ತಾಂತರ ಮಾಡಿ ಮಾತನಾಡಿದರು.

ಕಳೆದ ಪುರಸಭೆಯ ಸಾಮಾನ್ಯ ಸಭೆಯಲ್ಲಿ ಜರುಗಿದ ಸಭಾ ನಡವಳಿಕೆಯಲ್ಲಿ ತೀರ್ಮಾನಿಸಿರುವಂತೆ ಪಟ್ಟಣದ ವ್ಯಾಪ್ತಿಯಲ್ಲಿ 10 ನಿವೇಶನಗಳ ಖಾತೆಯನ್ನು ಸಿಡಿಪಿಓ ಇಲಾಖೆಗೆ ವರ್ಗಾಯಿಸಿ ಈ ಸ್ವತ್ತು ಮುದ್ರಿಸಿ ಪುರಸಭೆಯಿಂದ ಹಸ್ತಾಂತರಿಸುವ ಮೂಲಕ ಸುಮಾರು ವರ್ಷಗಳ ಸಮಸ್ಯೆಗೆ ಇದೀಗ ಪರಿಹಾರ ಸಿಕ್ಕಂತಾಗಿದ್ದು ಸದರಿ ನಿವೇಶನಗಳಲ್ಲಿ ಅಂಗನವಾಡಿ ಕಟ್ಟಡಗಳನ್ನು ನಿರ್ಮಾಣ ಮಾಡಲು ಪುರಸಭೆಯಿಂದ ಪ್ರತಿ ಕಟ್ಟಡಕ್ಕೆ ನಗರೋತ್ತನ ಹಂತ 4 ರ ಯೋಜನೆಯಡಿಯಲ್ಲಿ ರೂ 7 ಲಕ್ಷ ಅನುದಾನ ಮೂರು ಕಟ್ಟಡಗಳಿಗೆ ಮಂಜೂರಾಗಿದ್ದು ಉಳಿದ ಕಟ್ಟಡಗಳಿಗೆ ಡಿ.ಎಂ.ಎಫ್ ಅಥವಾ ಕೆಎಂಆರ್‌ಸಿ ಅನುದಾನದಡಿಯಲ್ಲಿ ನಿರ್ಮಾಣ ಮಾಡಿ ಶಾಶ್ವತ ಪರಿಹಾರ ಮಾಡಲಾಗುವುದು ಎಂದರು.



ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ.ಮಾತನಾಡಿ ಪುರಸಭೆಯಿಂದ ಈಗಾಗಲೆ ಪಟ್ಟಣದ ಎನ್‌ಇಎಸ್ ಬಡಾವಣೆಯಲ್ಲಿ ಕಟ್ಟಡ ನಿರ್ಮಿಸಿ ಕೊಡಲಾಗಿದ್ದು ಉಳಿದ ಅಂಗನವಾಡಿ ಕೇಂದ್ರಗಳನ್ನು ತೆರೆಯಲು ನಿವೇಶನಕ್ಕಾಗಿ ಪುರಸಭಾ ಸದಸ್ಯರು ತಮ್ಮ ವಾರ್ಡ್ ಮಟ್ಟದಲ್ಲಿ ಸ್ಥಳಗಳನ್ನು ಗುರುತಿಸಲು ಸಹಕಾರಿಯಾಗಿದ್ದು ಸಾಮಾನ್ಯ ಸಭೆಯಲ್ಲಿ ಸರ್ವಾನು ಮತದಿಂದ ನಿವೇಶನಗಳನ್ನು ನೀಡಲು ತೀರ್ಮಾನಿಸಿರುವುದರ ಜೋತೆಗೆ ಮುಖ್ಯಮಂತ್ರಿಗಳ ಮಹತ್ವದ ಸಭೆಯಲ್ಲಿ ಜಿಲ್ಲಾಧಿಕಾರಿಯವರಿಗೆ ಸೂಚಿಸಿದಂತೆ ಜಿಲ್ಲಾಧಿಕಾರಿಗಳು ಜಿಲ್ಲಾ ಮಟ್ಟದ ಸಭೆಯಲ್ಲಿ ಅಂಗನವಾಡಿಗೆ ನಿವೇಶನ ಮಂಜೂರಾತಿ ಮಾಡಲು ವಿಳಂಭಕ್ಕೆ ಅವಕಾಶ ನೀಡದೆ ತುರ್ತಾಗಿ ಕ್ರಮ ವಹಿಸಲು ಸೂಚಿಸಿದ್ದರು ಎಂದು ತಿಳಿಸಿದರು.

ಸಿಡಿಪಿಓಕುಮಾರಿಅಭಿಲಾಷಮಾತನಾಡಿ ಅಂಗನವಾಡಿ ಕೇಂದ್ರಗಳನ್ನು ತೆರೆಯಲು ಸರ್ಕಾರದ ನಿವೇಶನ ನೀಡಿರುವ ವಿಚಾರ ಅತ್ಯಂತ ಶ್ಲಾಘನೀಯವಾದದ್ದು ಹಾಗೂ ನಿವೇಶನಗಳ ಮಂಜೂರಾತಿಯಿಂದ ಸ್ವಂತ ಕಟ್ಟಡಗಳನ್ನು ನಿರ್ಮಿಸಿ ನಡೆಸುವುದರಿಂದ ಸರ್ಕಾರಕ್ಕೆ ಬಾಡಿಗೆ ಹಣ ಉಳಿತಾಯವಾದಂತಾಗುತದೆ ಹಾಗೂ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಪಡೆಯಲು ಅನುಕೂಲವಾಗುತ್ತದೆ ಎಂಬ ಅಭಿಪ್ರಾಯವನ್ನ ವ್ಯಕ್ತಪಡಿಸಿದರು. ಈ ಸಂಧರ್ಬದಲ್ಲಿ ನಿಗಮ ಮಂಡಳಿ ಮಾಜಿ ಅಧ್ಯಕ್ಷ ಗೋ.ತಿಪ್ಪೇಶ್ ,ಪುರಸಭಾ ಸದಸ್ಯ ಜಾಫರ್‌ಸಾಧಿಕ್ ಉಪಸ್ಥಿತರಿದ್ದರು.

# ಅದಿರು ಸಾಗಿಸಲು ತಡೆ ಗಣಿ ಕಂಪನಿಗಳ ವಿರುದ್ದ ಲಾರಿ ಮಾಲೀಕರುಗಳ ಮುಷ್ಕರ

» ಚಿತ್ರದುರ್ಗ

ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸಭೆಯಲ್ಲಿ ಆದ ತೀರ್ಮಾನದಂತೆ ಶೇ.30;70 ಅನುಪಾತದಡಿ ಕಬ್ಬಿಣದ ಅದಿರು ಸಾಗಾಣಿಕೆ ಮಾಡಲು ಅವಕಾಶ ನೀಡದಿರುವ ಹಿರೇಗುಂಟನೂರು ಹೋಬಳಿ ಬೆದರು ಬೊಮ್ಮನಹಳ್ಳಿ ಮತ್ತು ಮೇಗಳಹಳ್ಳಿ ಮಿನರಲ್ ಎಂಟರ್ ಪ್ರೈಸಸ್ ಸೇಸಾ ಗೋವಾ(ವೇದಾಂತ) ಮೈನ್ಸ್ ವಿರುದ್ಧ ಚಿತ್ರದುರ್ಗ ಅದಿರು ಮತ್ತು ಸರಕು ಸಾಗಾಣಿಕೆ ಲಾರಿ ಮಾಲೀಕರ ಸಂಘದಿಂದ ಒನಕೆ ಓಬವ್ವ ವೃತ್ತದಲ್ಲಿ ಧರಣಿ ಮುಂದುವರೆದಿದೆ.

ದಿನಾಂಕ : 4–7–2013 ಅಂದಿನ ಜಿಲ್ಲಾಧಿಕಾರಿ ವಿ.ಪಿ.ಇಕ್ಕೇರಿ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸಭೆಯಲ್ಲಿ ಪೊಲೀಸ್ ವರಿಷ್ಠಾಧಿಕಾರಿ, ಉಪ ಅರಣ್ಯ ಸಂರಕ್ಷಣಾಧಿಕಾರಿ, ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ಪರಿಸರ ಮತ್ತು ವಾಯು ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು, ಗಣಿಗುತ್ತಿಗೆ ಪ್ರತಿನಿಧಿಗಳು ಲಾರಿ ಮಾಲೀಕರ ಸಮುಖ್ಯದಲ್ಲಿ ನಡೆದ ತೀರ್ಮಾನದಂತೆ ಶೇ.70 ರಷ್ಟು ಕಬ್ಬಿಣದ ಅದಿರು ರೈಲು ಮೂಲಕ ಮತ್ತು ಶೇ.30 ಅದಿರನ್ನು ಲಾರಿಗಳ ಮೂಲಕ ಸಾಗಿಸುವಂತೆ ತೀರ್ಮಾನವಾಗಿತ್ತು. ಆದರೆ ಗಣಿ ಮಾಲೀಕರುಗಳು ಸಭೆಯಲ್ಲಿ ಆದ ತೀರ್ಮಾನದಂತೆ ನಿಯಮ ಪಾಲಿಸದಿರುವುದರಿಂದ ಲಾರಿ ಮಾಲೀಕರುಗಳು ಜೀವನ ಸಾಗಿಸಲು ಆಗದೆ ಬೀದಿಗೆ ಬಿದ್ದಿದ್ದಾರೆ. ನ್ಯಾಯ ಕೇಳಲು ಹೋದರೆ ಗಣಿ ಮಾಲೀಕರುಗಳು ನಮ್ಮ ಮೇಲೆ ದೌರ್ಜನ್ಯವೆಸಗುತ್ತಿದ್ದಾರೆ. ಕಬ್ಬಿಣದ ಅದಿರು ಸಾಗಿಸಲು ಲಾರಿಗಳಿಗೆ ಅವಕಾಶ ನೀಡುವಂತೆ ಪ್ರತಿಭಟನಾನಿರತರು ಜಿಲ್ಲಾಡಳಿತವನ್ನು ಒತ್ತಾಯಿಸಿದರು.




ಚಿತ್ರದುರ್ಗ ಅದಿರು ಮತ್ತು ಸರಕು ಸಾಗಾಣಿಕೆ ಲಾರಿ ಮಾಲೀಕರ ಸಂಘದ ಅಧ್ಯಕ್ಷ ಎಂ.ಡಿ.ಅಶ್ವಕ್‌ಆಲಿ, ಗೌರವಾಧ್ಯಕ್ಷ ಮಹಮದ್ ಇಮ್ರಾನ್, ಕಾರ್ಯದರ್ಶಿ ಡಿ.ನಾಗರಾಜ್ ಸೈಯದ್ ಅನೀಸ್, ಸಾಧಿಕ್, ಶಂಷೀರ್, ಕೊಟ್ರೇಶ್, ಲೋಕೇಶ್, ಫಾರೂಖ್ ಇನ್ನು ಮುಂತಾದವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದಾರೆ.

## ಚಿರತೆ ಸಾವು ಅನುಮಾನಾಸ್ಪದ : ತನಿಖೆಗೆ ವಿಜಯಸೇನೆ ಒತ್ತಾಯ




» ಚಿತ್ರದುರ್ಗ

ಹೊರವಲಯದ ತಮಟಕಲ್ಲು ರಸ್ತೆ, ಹೊಸ ಬೈಪಾಸ್‌ನಲ್ಲಿ ಅಪಘಾತಕ್ಕೀಡಾಗಿ ಚಿರತೆ ಸಾವನ್ನಪ್ಪಿದೆ ಎಂದು ಮಾಧ್ಯಮಗಳಲ್ಲಿ ಬಿತ್ತರವಾಗಿದೆ. ಆದರೆ ಇದು ಅಕ್ರಮ ಗಣಿಗಾರಿಕೆ, ಕಲ್ಲು ಬ್ಲಾಸ್ಟಿಂಗ್‌ನಿಂದ ಮೃತಪಟ್ಟಿದೆ ಎಂಬ ಅನುಮಾನವಿದ್ದು, ಸೂಕ್ತ ತನಿಖೆ ನಡೆಸುವಂತೆ ಅರಣ್ಯ ಇಲಾಖೆ ಎದುರು ಕರುನಾಡ ವಿಜಯಸೇನೆ ಕಾರ್ಯಕರ್ತರು ಬುಧವಾರ ಪ್ರತಿಭಟನೆ ನಡೆಸಿ ವಲಯ ಅರಣ್ಯ ಸಂರಕ್ಷಣಾಧಿಕಾರಿಗೆ ಮನವಿ ಸಲ್ಲಿಸಿದರು.

ಇದೆ ಸ್ಥಳದಲ್ಲಿ ಎರಡು ಮೂರು ಚಿರತೆ ಅಪಘಾತಗಳಿಂದ ಸಾವನ್ನಪಿವೆ. ಇಲ್ಲಿ ನಡೆಯುವ ಕಲ್ಲು ಬ್ಲಾಸ್ಟಿಂಗ್‌ಗೆ ಹೆದರಿ ಓಡುವ ಚಿರತೆಗಳು ಹೆದ್ದಾರಿಯಲ್ಲಿ ವಾಹನಗಳಿಗೆ ಸಿಲುಕಿ ಸಾವನ್ನಪ್ಪಬಹುದು. ಆದರೆ ಈಗ ಸತ್ತಿರುವ ಚಿರತೆ ಅಪಘಾತದಿಂದಲ್ಲ ಎನ್ನುವುದು ಮೇಲ್ನೋಟಕ್ಕೆ ಗೊತ್ತಾಗುತ್ತದೆ. ಹಾಗಾಗಿ ಸೂಕ್ತ ತನಿಖೆ ನಡೆಸಿ ವನ್ಯ ಜೀವಿಗಳ ಪ್ರಾಣ ಉಳಿಸಬೇಕು. ಅಕ್ರಮ ಗಣಿಗಾರಿಕೆ ವಿರುದ್ದ ಇದುವರೆವಿಗೂ ಯಾವುದೇ ರೀತಿಯ ಕ್ರಮ ಕೈಗೊಳ್ಳದಿರುವುದು ನೋವಿನ ಸಂಗತಿ. ಕೂಡಲೆ ಗಣಿಗಾರಿಕೆ ಪರವಾನಗಿಯನ್ನು ರದ್ದುಪಡಿಸಬೇಕು. ಬಂಡಿಪುರ, ನಾಗರಹೊಳೆ ಅರಣ್ಯ ಪ್ರದೇಶಗಳಲ್ಲಿ ಸಂಜೆ 6 ರಿಂದ ಬೆಳಿಗ್ಗೆ 6 ರವರೆಗೆ ಯಾವುದೇ ವಾಹನಗಳು ಸಂಚರಿಸದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಂಡಿರುವ ರೀತಿಯಲ್ಲಿ ಈ ಭಾಗದಲ್ಲೂ ಸಹ ವಾಹನಗಳ ಓಡಾಟಕ್ಕೆ ಬ್ರೇಕ್ ಹಾಕಿ ವಿದ್ಯುತ್ ದೀಪದ ವ್ಯವಸ್ಥೆ ಹಾಗೂ ಸುತ್ತಮುತ್ತಲು ಸಿ.ಸಿ.ಕ್ಯಾಮರಾ ಅಳವಡಿಸುವಂತೆ ಪ್ರತಿಭಟನೆ ನೇತೃತ್ವ ವಹಿಸಿದ್ದ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಒತ್ತಾಯಿಸಿದರು. ಮಹಿಳಾಧ್ಯಕ್ಷೆ ವೀಣಗೌರಣ್ಣ, ಪ್ರಧಾನ ಕಾರ್ಯದರ್ಶಿ ಗೋಪಿನಾಥ್, ಕಾರ್ಯದರ್ಶಿ ಜಗದೀಶ್, ರಾಜ್ಯ ಸಮಿತಿ ಸದಸ್ಯ ನಿಸಾರ್‌ಅಹಮದ್, ಉಪಾಧ್ಯಕ್ಷ ಮುಜಾಹಿದ್, ನಗರಾಧ್ಯಕ್ಷ ಅವಿನಾಶ್, ಯುವ ಘಟಕದ ಅಧ್ಯಕ್ಷ ನಾಗರಾಜ್ ಮುತ್ತು, ಸಂಚಾಲಕ ನಾಗೇಶ್, ರಾಜಣ್ಣ, ಮಧುಸೂದನ್, ವಿದ್ಯಾರ್ಥಿ ಘಟಕದ ಅಧ್ಯಕ್ಷ ಅಖಿಲೇಶ್ ಇವರುಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ರಾಜ್ಯ ಮಟ್ಟದಲ್ಲಿ ಚಿನ್ನ ಮತ್ತು ಬೆಳ್ಳಿ ಪದಕ ಪಡೆದ ಹೊಸದುರ್ಗದ ಕರಾಟೆ ಮಕ್ಕಳು

**ಹೊಸದುರ್ಗ:** ಬೆಂಗಳೂರಿನ ಕೋರಮಂಗಲ ಒಳಾಂಗಣ ಕ್ರೀಡಾಂಗಣದಲ್ಲಿ ನಡೆದಂತಹ ರಾಜ್ಯಮಟ್ಟದ ಟೇಕ್ವಾಂಡೋ ( ಕರಾಟೆ ) ಚಾಂಪಿಯನ್ ಶಿಪ್ ನಲ್ಲಿ ಭಾಗವಹಿಸಿದ್ದ ಹೊಸದುರ್ಗ ತಾಲ್ಲೂಕು ಮಕ್ಕಳಾದ ಸಾಯಿಸಮೃಧ ಆರ್. ಜಿ. ಶ್ರಾವಂತಿ. ಲಾವಣ್ಯ. ತಮೋಘ್ನ. ರಜತ್. ದಿಶಿತಾ. ಸಂಪತ್. ಅಂಜನ್. ಚಿನ್ನ ಮತ್ತು ಬೆಳ್ಳಿ ಪದಕವನ್ನು ಪಡೆದು ಕೊಂಡಿದಾರೆ ಅವರಿಗೆ ತರಬೇತಿದಾರರಾದ ಮಾಸ್ಟರ್ ರಜನಿಕಾಂತ್ ಹಾಗೂ ತಾಲೂಕಿನ ಗಣ್ಯರು ಅಭಿನಂದನೆ ಸಲ್ಲಿಸಿದ್ದಾರೆ.




ಪ್ರಮುಖ ಸುದ್ದಿ

### ಹರ್ ಘರ್ ತಿರಂಗಾ ಅಭಿಯಾನ; ಗಂಡನಿಗಾಗಿ ಕಾಯುತ್ತಿರುವ ಗರ್ಭಿಣಿ ಚಿತ್ತಾರಕ್ಕೆ ಪ್ರಥಮ ಬಹುಮಾನ

# ರಂಗೋಲಿಯಲ್ಲಿ ಅರಳಿದ ದೇಶ ಕಾಯುವ ಸೈನಿಕ

» ದಾವಣಗೆರೆ

ಹರ್ ಘರ್ ತಿರಂಗಾ ಅಭಿಯಾನದ ಅಂಗವಾಗಿ ಬುಧವಾರ ಗ್ಲಾಸ್ ಹೌಸ್‌ನಲ್ಲಿ ಹಮಿಕೊಳ್ಳಲಾಗಿದ್ದು 52 ವಿವಿಧ ಬಗೆಯ ರಂಗೋಲಿಚಿತ್ತಾರಗಳನ್ನುಬಿಡಿಸಲಾಗಿದ್ದು ಇದರಲ್ಲಿ ಅತ್ಯುತ್ತಮವಾಗಿ ಬಿಡಿಸಿದ ರಂಗೋಲಿಗೆ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿಯವರು ಬಹುಮಾನ ವಿತರಣೆ ಮಾಡಿದರು.

ರಂಗೋಲಿ ಸ್ಪರ್ಧೆಯಲ್ಲಿ ಅಂಗನವಾಡಿ ಕಾರ್ಯಕರ್ತೆಯರು, ಸ್ವ ಸಹಾಯ ಸಂಘದ ಮಹಿಳೆಯರು, ಜನಸಾಮಾನ್ಯ ಮಹಿಳೆಯರು ಮತ್ತು ಇಲಾಖೆಯಲ್ಲಿ ಕೆಲಸ ಮಾಡುವಂತಹ ಮಹಿಳೆಯರು ಈ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು.

ರಂಗೋಲಿಯನ್ನು ತ್ರಿವರ್ಣದಲ್ಲಿ ಬಿಡಿಸಲಾಗಿದ್ದು ಒಬ್ಬಬ್ಬರು ಒಂದೊಂದು ದೇಶ ಭಕ್ತಿ ಕಲ್ಪನೆಯೊಂದಿಗೆ ರಂಗೋಲಿ ಬಿಡಿಸಿದ್ದರು. ಈ ರೀತಿಯ ವಿವಿಧ ದೇಶ ಭಕ್ತಿ ಮೂಡಿಸುವ 52 ಚಿತ್ತಾರಗಳನ್ನು ಬಿಡಿಸಲಾಗಿತ್ತು. ಇದರಲ್ಲಿ ಅತ್ಯುತ್ತಮ ಕಲ್ಪನೆ ಮತ್ತು ಚನ್ನಾಗಿ ಬಿಡಿಸಿದ ಹಳೆಚಿಕ್ಕನಹಳ್ಳಿ ನಾಗಮ್ಮ ಇವರ ರಂಗೋಲಿ 'ಒಂದೆಡೆ ದೇಶ ಕಾಯುವ ಸೈನಿಕರು, ಮತ್ತೊಂದೆಡೆ ತನ್ನ ಗಂಡನಿಗಾಗಿ ಕಾಯುತ್ತಿರುವ ಗರ್ಭಿಣಿ ಈ ಚಿತ್ರ ದೇಶ ಭಕ್ತಿ ಮತ್ತು ಮನ ಮಿಡಿಯುವಂತಿತ್ತು. ಇದು ಪ್ರಥಮ ಬಹುಮಾನ ಗಳಿಸಿತು.



ಎರಡನೇ ಬಹುಮಾನಕ್ಕೆ ಸಂಧ್ಯಾ ಇವರು ಬಿಡಿಸಿದ ಅನೇಕತೆಯಲ್ಲಿ ಏಕತೆಯ ಗೌರವ, ಮೆರಾ ಭಾರತ್ ಮಹಾನ್ ರಂಗೋಲಿ ಮತ್ತು ತೃತೀಯ ಬಹುಮಾನವಾಗಿ ಸೌಭಾಗ್ಯ ಇವರು ಬಿಡಿಸಿದ ನನ್ನ ಧ್ವಜ ಸದಾ ಮೇಲೆ ಮತ್ತು ವನಜಾಕ್ಷಿ, ಮಂಜುಳಾ, ಸುಶೀಲಾ ಇವರು ಬಿಡಿಸಿದ ರಂಗೋಲಿಗೆ ಸಮಾಧಾನಕರ ಬಹುಮಾನ ನೀಡಲಾಯಿತು.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ರಾಜಾನಾಯ್ಕ್, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ರಾಘವೇಂದ್ರ ಪ್ರಸಾದ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಭಾಗವಹಿಸಿದ್ದರು.

ತೀರ್ಪುಗಾರರಾಗಿ ವಸಂತ ಕೆ.ಆರ್, ಶಾಂತಯ್ಯ ಮಠ್, ರೇಷ್ಮಾ ಫರ್ವೀನ್ ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T